ಜನಮನದ ದನಿ

# ಪ್ರಜೋದಯ


ಸಂಪಾದಕ : ಜೆ.ಆರ್. ಕೆಂಚೇಗೌಡ




ಭಾರತ ಕ್ರಿಕೆಟ್ ತಂಡಕ್ಕೆ ಮರಳುವ ತವಕದಲ್ಲಿರುವ ಅನುಭವಿ ವೇಗಿ ಮೊಹಮ್ಮದ್ ಶಮಿ ಅವರು ರಣಜಿ ಟ್ರೋಫಿ ಎರಡು ಪಂದ್ಯಗಳಲ್ಲಿ ಅಮೋಘವಾಗಿ ಬೌಲಿಂಗ್ ಮಾಡಿ ತಮ್ಮ ಫಿಟ್‌ನೆಸ್ ಸಾಬೀತು ಮಾಡಿದ್ದಾರೆ.


29 ಅಕ್ಟೋಬರ್ 2025 ಬುಧವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 228 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629





ಕನ್ನಡವೇ ಗಾಯತ್ರಿ ಮಂತ್ರ, ಧೀ ಶಕ್ತಿಯನ್ನು ಪ್ರಚೋದಿಸುವ ತಂತ್ರ » 2



ಹಲವು ಅಭಿವೃದ್ಧಿ ಕಾಮಗಾರಿಗೆ ಸಂಸದ ಭೂಮಿ ಪೂಜೆ » 3



ಕನ್ನಡ ರಾಜ್ಯೋತ್ಸವ : ಅಗತ್ಯ ಸಿದ್ಧತೆಗೆ ಸೂಚನೆ » 4


## ಮೊಂಥಾ ಚಂಡಮಾರುತ ಎದುರಿಸಲು ಆಂಧ್ರ , ಒಡಿಶಾ ಸಜ್ಜು

• ಪ್ರಜೋದಯ ವರದಿ

**ಅಮರಾವತಿ :** ಮೊಂಥಾ ಚಂಡಮಾರುತವು ತೀವ್ರ ಸ್ವರೂಪ ಪಡೆದುಕೊಂಡಿದ್ದು, ಮಂಗಳವಾರ ರಾತ್ರಿ ಹೊತ್ತಿಗೆ ಆಂಧ್ರ ಪ್ರದೇಶದ ಮಚಲಿಪಟ್ಟಣ ಮತ್ತು ಕಾಕಿನಾಡ ನಡುವೆ ಅಪ್ಪಳಿಸಬಹುದೆಂದು ಅಂದಾಜಿಸಲಾಗಿದೆ. ಗಾಳಿಯ ವೇಗವು ಗಂಟೆಗೆ 110 ಕಿ.ಮೀ ನಷ್ಟು ಇರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಆಂಧ್ರ ಪ್ರದೇಶ ಮತ್ತು ಒಡಿಶಾದ ಮೇಲೆಯೇ ಚಂಡಮಾರುತವು ಹೆಚ್ಚು ಪರಿಣಾಮ ಬೀರಲಿದೆ. ತೀವ್ರ ಮಳೆಯಾಗುವ ಪ್ರದೇಶಗಳು ಮತ್ತು ತಗ್ಗು ಪ್ರದೇಶಗಳ ಜನರನ್ನು ಸ್ಥಳಾಂತರಿಸುವ ಕಾರ್ಯವನ್ನು ಈ ರಾಜ್ಯಗಳಲ್ಲಿ ನಡೆಸಲಾಗುತ್ತಿದೆ. ಶಾಲೆಗಳು, ಅಂಗನವಾಡಿಗಳಿಗೆ ಅ.30ರವರೆಗೆ ರಜೆ ಘೋಷಿಸಲಾಗಿದೆ. ನೂರಾರು ಶಾಲೆಗಳನ್ನು ನಿರಾಶ್ರಿತ ಶಿಬಿರಗಳನ್ನಾಗಿ ಪರಿವರ್ತಿಸಲಾಗಿದೆ. ಅ.31ರಂದು ಪಶ್ಚಿಮ ಬಂಗಾಳದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

# ಆರ್‌ಎಸ್‌ಎಸ್ ವಿರುದ್ಧ ಆದೇಶಕ್ಕೆ ಹೈಕೋರ್ಟ್ ತಡೆ

### ಪಥ ಸಂಚಲನ ನಿರ್ಬಂಧಿಸಲು ಮುಂದಾದ ರಾಜ್ಯ ಸರ್ಕಾರಕ್ಕೆ ಹಿನ್ನಡೆ | ತಡೆಯಾಜ್ಞೆ ವಿರುದ್ಧ ಮೇಲ್ಮನವಿ ಸಲ್ಲಿಕೆಗೆ ನಿರ್ಧಾರ

• ಪ್ರಜೋದಯ ವರದಿ

**ಬೆಂಗಳೂರು:** ಆರ್‌ಎಸ್‌ಎಸ್ ಪಥ ಸಂಚಲನ ನಿರ್ಬಂಧಿಸಲು ಮುಂದಾಗಿದ್ದ ರಾಜ್ಯ ಸರ್ಕಾರಕ್ಕೆ ಹಿನ್ನಡೆಯಾಗಿದೆ. ಖಾಸಗಿ ಸಂಘಟನೆಗಳು ಸರ್ಕಾರಿ ಸ್ಥಳ ಬಳಕೆಗೆ ಅನುಮತಿ ಪಡೆಯಬೇಕೆಂಬ ಸರ್ಕಾರದ ನಿಯಮಕ್ಕೆ ಹೈಕೋರ್ಟ್ ಮಧ್ಯಂತರ ತಡೆ ನೀಡಿದೆ. ತಡೆಯಾಜ್ಞೆ ವಿರುದ್ಧ ಮೇಲ್ಮನವಿ ಸಲ್ಲಿಕೆ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚಿಸಿದ್ದಾರೆ.

ಆರ್‌ಎಸ್‌ಎಸ್‌ಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಖಾಸಗಿ ಸಂಘಟನೆಗಳು ಸರ್ಕಾರಿ ಸ್ಥಳ ಬಳಕೆಗೆ ನಿರ್ಬಂಧ ವಿಧಿಸಿ ಪೂರ್ವಾನುಮತಿ ಕಡ್ಡಾಯವೆಂದು ಸಚಿವ ಸಂಪುಟದಲ್ಲಿ ತೀರ್ಮಾನ ಕೈಗೊಂಡಿತ್ತು. ಶೀಘ್ರದಲ್ಲಿಯೇ ಈ ಬಗ್ಗೆ ಪ್ರಬಲ ಕಾನೂನು ಜಾರಿಯಾಗುತ್ತಿತ್ತು. ಸರ್ಕಾರದ ಈ ನಿರ್ಬಂಧವನ್ನು ಪ್ರಶ್ನಿಸಿ ಹುಬ್ಬಳ್ಳಿಯ ಪುನಃಶ್ಚೇತನ ಸೇವಾ ಸಂಸ್ಥೆ ಅಧ್ಯಕ್ಷ ವಿನಾಯಕ



ಮತ್ತು ವಿ ಕೇರ್ ಫೌಂಡೇಶನ್ ಅಧ್ಯಕ್ಷ ಗಂಗಾಧರಯ್ಯ, ಧಾರವಾಡದ ರಾಜೀವ ಮಲ್ಹಾರ ಕುಲಕರ್ಣಿ ಹಾಗು ಬೆಳಗಾವಿಯ ಉಮಾ ಸತ್ಯಜಿತ್ ಚವಾಣ್ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ (ಧಾರವಾಡ) ಮಂಗಳವಾರ ಬೆಳಿಗ್ಗೆ ವಿಚಾರಣೆ ನಡೆಸಿತು.

ಅರ್ಜಿದಾರರ ಪರ ಹಿರಿಯ ವಕೀಲ ಅಶೋಕ್ ಹಾರನಹಳ್ಳಿ ವಾದ ಮಂಡಿಸಿ, ಹತ್ತು ಜನಕ್ಕಿಂತ ಹೆಚ್ಚು ಮಂದಿ ಸೇರಿ ಅನುಮತಿ ಪಡೆಯಬೇಕೆಂದು ಸರ್ಕಾರ ಆದೇಶಿಸಿದೆ. ಇದು ಸಂವಿಧಾನದತ್ತವಾಗಿ ಲಭ್ಯವಾಗಿರುವ ಮೂಲಭೂತ ಹಕ್ಕಿಗೆ ನಿರ್ಬಂಧವಾಗಿದೆ. ಪಾರ್ಕ್‌ನಲ್ಲಿ ನಗೆಕೂಟ ನಡೆಸಿದರೂ ಸರ್ಕಾರದ ಆದೇಶದ ಪ್ರಕಾರ ಅಕ್ರಮ ಕೂಟವಾಗುತ್ತದೆ ಎಂದು ಪೀಠದ ಗಮನಕ್ಕೆ ತಂದರು. ಸರ್ಕಾರಿ ಪರ ವಕೀಲರು ವಾದ ಮಂಡಿಸಲು ಒಂದು ದಿನ ಕಾಲಾವಕಾಶ ಕೋರಿದರು. ವಾದ ಆಲಿಸಿದ ನ್ಯಾಯಪೀಠ ಸರ್ಕಾರದ ನಿರ್ಧಾರಕ್ಕೆ ತಡೆ ನೀಡಿ ಆದೇಶಿಸಿತು.

ಪ್ರತಿವಾದಿಗಳಾದ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಗೃಹ ಇಲಾಖೆ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ ಕಾರ್ಯದರ್ಶಿ, ಡಿಜಿ-ಐಜಿಪಿ ಹಾಗೂ ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮೀಷನರ್ ಸೇರಿ ಪ್ರಕರಣದ ಎಲ್ಲಾ ಪ್ರತಿವಾದಿಗಳಿಗೆ ನೋಟೀಸ್ ಜಾರಿಗೊಳಿಸಲು ಆದೇಶಿಸಿ ವಿಚಾರಣೆ ಮುಂದೂಡಿತು.

#### ಮೇಲ್ಮನವಿ ಸಲ್ಲಿಸಲು ಸಿಎಂ ಸೂಚನೆ

ಸಾರ್ವಜನಿಕ ಅಥವಾ ಸರ್ಕಾರಿ ಸ್ಥಳಗಳಲ್ಲಿ ಖಾಸಗಿ ಸಂಸ್ಥೆಗಳ ಚಟುವಟಿಕೆಗಳನ್ನು ನಿಯಂತ್ರಿಸುವ ರಾಜ್ಯ ಸರ್ಕಾರದ ಆದೇಶಕ್ಕೆ ಕರ್ನಾಟಕ ಹೈಕೋರ್ಟ್ ನೀಡಿರುವ ತಡೆಯಾಜ್ಞೆ ವಿರುದ್ಧ ಮೇಲ್ಮನವಿ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇನೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಭಾಗೀಯ ಪೀಠದ ಮುಂದೆ ಮೇಲ್ಮನವಿ ಸಲ್ಲಿಸುವಂತೆ ನಾನು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಧಾರವಾಡ ಹೈಕೋರ್ಟ್ ಏಕ ಸದಸ್ಯ ಪೀಠ ತಡೆಯಾಜ್ಞೆ ನೀಡಿದೆ. ಈ ಆದೇಶದ ವಿರುದ್ಧ ನಾವು ಮೇಲ್ಮನವಿ ಸಲ್ಲಿಸುತ್ತೇವೆಂದು ತಿಳಿಸಿದರು.

#### ಅರ್ಜಿದಾರರ ಕೋರಿಕೆ ಏನು

ಸರ್ಕಾರಿ ಸ್ಥಳಗಳಲ್ಲಿ ಅನುಮತಿ ಇಲ್ಲದ ಮೆರವಣಿಗೆ, ಸಭೆ ನಡೆಸುವುದನ್ನು ನಿರ್ಬಂಧಿಸಿ ಸರ್ಕಾರ ಇದೇ 18 ರಂದು ಹೊರಡಿಸಿರುವ ಆದೇಶ ಸಂವಿಧಾನದ 13,14 ಮತ್ತು 19ನೇ ವಿಧಿಗಳ ಸ್ಪಷ್ಟ ಉಲ್ಲಂಘನೆಯಾಗಿದೆ. ಆದ್ದರಿಂದ, ಈ ಆದೇಶವನ್ನು ರದ್ದುಗೊಳಿಸಬೇಕೆಂದು ಅರ್ಜಿದಾರರು ಕೋರಿದ್ದಾರೆ.

#### ಸರ್ಕಾರದ ಆದೇಶದಲ್ಲಿ ಏನಿದೆ

ನೋಂದಣಿಯಾದ ಅಥವಾ ನೋಂದಣಿ ಆಗದ ಯಾವುದೇ ಖಾಸಗಿ ಸಂಸ್ಥೆ ಅಥವಾ ಜನರು ಸರ್ಕಾರದ ಆಸ್ತಿಯನ್ನು ಅಂದರೆ, ಜಮೀನು, ರಸ್ತೆ, ಪಾರ್ಕ್, ಆಟದ ಮೈದಾನಗಳು ಅಥವಾ ಕಟ್ಟಡಗಳಲ್ಲಿ ಸೇರಬೇಕಾದರೆ ಇಲ್ಲವೇ ಜಮಾವಣೆ ಗೊಳ್ಳಬೇಕೆಂದು ನಿರ್ಧರಿಸಿದರೆ, ಸ್ಥಳೀಯ ಪೊಲೀಸ್ ಕಮೀಷನರ್ ಅಥವಾ ಡೆಪ್ಯೂಟಿ ಕಮೀಷನರ್ ಅವರಿಂದ ಕಡ್ಡಾಯವಾಗಿ ಪೂರ್ವಾನುಮತಿ ಪಡೆಯಬೇಕು. ಇಲ್ಲವಾದಲ್ಲಿ ಇದು ಭಾರತೀಯ ನ್ಯಾಯ ಸಂಹಿತೆ-2023ರ ಪ್ರಕಾರ ಕಾನೂನು ಬಾಹಿರ ಅಕ್ರಮ ಕೂಟವೆಂದು ಪರಿಗಣಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ರಾಜ್ಯ ಗೃಹ ಇಲಾಖೆಯ ಕಾರ್ಯದರ್ಶಿ ಹೊರಡಿಸಿರುವ ಈ ಆದೇಶದಲ್ಲಿ ವಿವರಿಸಲಾಗಿದೆ.

## ಸ್ವಚ್ಛತೆ ನಿರ್ಲಕ್ಷ್ಯ: ಪಾಲಿಕೆ ಆಯುಕ್ತರಿಗೆ ಕಡ್ಡಾಯ ರಜೆ ಆದೇಶ ನೀಡಿದ ಡಿ.ಸಿ.

• ಪ್ರಜೋದಯ ವರದಿ

**ಹಾಸನ:** ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾರ್ಯಗಳಲ್ಲಿ ನಿರ್ಲಕ್ಷ್ಯ ವಹಿಸಿರುವ ಪಾಲಿಕೆ ಆಯುಕ್ತ ಆರ್. ಕೃಷ್ಣಮೂರ್ತಿ ಅವರನ್ನು ಕಡ್ಡಾಯ ರಜೆ ಮೇಲೆ ತೆರಳುವಂತೆ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಅವರು ಆದೇಶ ಹೊರಡಿಸಿದ್ದಾರೆ.



ಪ್ರತಿ ಮಂಗಳವಾರ ನಗರ ಪರಿವೀಕ್ಷಣೆಯ ಭಾಗವಾಗಿ ಜಿಲ್ಲಾಧಿಕಾರಿ ಅವರ ನೇತೃತ್ವದಲ್ಲಿ ನಗರದಲ್ಲಿನ ವಿವಿಧ ಪ್ರದೇಶಗಳಲ್ಲಿ ಸ್ವಚ್ಛತೆ, ಮಾರುಕಟ್ಟೆ ಮತ್ತು ಸಂತೆ ಪ್ರದೇಶಗಳ ನಿರ್ವಹಣೆ, ಹುಣಸಿನಕೆರೆ ಸುತ್ತಮುತ್ತಲಿನ ಪರಿಸರ ಹಾಗು ಬೀದಿ ನಾಯಿಗಳ ನಿಯಂತ್ರಣ ಕ್ರಮಗಳನ್ನು ಪರಿಶೀಲಿಸಿದ್ದರು.

ಬೆಳಿಗ್ಗೆ 8 ಗಂಟೆ ವೇಳೆಗೆ ನಡೆದ ಪರಿವೀಕ್ಷಣೆಯ ವೇಳೆ ಹುಣಸಿನಕೆರೆ ವ್ಯಾಪ್ತಿಯ 80 ಅಡಿ ರಸ್ತೆಯ ಬದಿಗಳಲ್ಲಿ ಹಾಗು ಸುತ್ತಮುತ್ತ ಕಸದ ರಾಶಿ ನೋಡಿದ ಜಿಲ್ಲಾಧಿಕಾರಿ, ಪಾಲಿಕೆಯ ಹಲವಾರು ವಾರ್ಡ್‌ಗಳಲ್ಲಿ ಸ್ವಚ್ಛತಾ ಕಾರ್ಯ ಸರಿಯಾಗಿ ನಡೆಯುತ್ತಿಲ್ಲವೆಂದು ಆಯುಕ್ತರ ಮೇಲೆ ಅಸಮಾಧಾನ ವ್ಯಕ್ತಪಡಿಸಿ, ತಕ್ಷಣವೇ ಕಸ ವಿಲೇವಾರಿ ಮಾಡುವ ಜೊತೆಗೆ, ಸಾರ್ವಜನಿಕರು ತ್ಯಾಜ್ಯ ವಸ್ತುಗಳನ್ನು ರಸ್ತೆ ಬದಿಯಲ್ಲಿ ಎಸೆಯದಂತೆ ಕ್ರಮ ಕೈಗೊಳ್ಳುವಂತೆ ಆಯುಕ್ತರಿಗೆ ಸೂಚನೆ ನೀಡಿದರು.

ಆದರೆ, ಆಯುಕ್ತ ಆರ್. ಕೃಷ್ಣಮೂರ್ತಿ ಅವರು ಪಾಲಿಕೆಯಲ್ಲಿ ಸ್ವಚ್ಛತಾ ಸಿಬ್ಬಂದಿ ಕೊರತೆ ಇದೆ ಎಂದು ಉಡಾಫೆಯಾಗಿ ಸ್ಪಷ್ಟನೆ ನೀಡಿರುವುದಲ್ಲದೆ, ಮೇಲಾಧಿಕಾರಿಗಳ ಆದೇಶ ಪಾಲನೆಗೆ ನಿರ್ಲಕ್ಷ್ಯ ರೀತಿಯಲ್ಲಿ ವರ್ತಿಸಿರುವ ಹಿನ್ನಲೆ ಜಿಲ್ಲಾಧಿಕಾರಿ ತೀವ್ರ ಅಸಮಾಧಾನ ವ್ಯಕ್ತಪಡಿಸಿ ತಕ್ಷಣದಿಂದಲೇ ಕಡ್ಡಾಯ ರಜೆಗೆ ಕಳುಹಿಸುವ ಆದೇಶ ಹೊರಡಿಸಿದ್ದಾರೆ. ಇದೇ ವೇಳೆ, ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಕೆ.ಎಂ. ರಮೇಶ್ ಅವರನ್ನು ಮುಂದಿನ ಆದೇಶ ಬರುವವರೆಗೆ ಮಹಾನಗರ ಪಾಲಿಕೆಯ ಆಯುಕ್ತರ ಹೆಚ್ಚುವರಿ ಪ್ರಭಾರಕ್ಕೆ ನಿಯೋಜಿಸಲಾಗಿದೆ ಎಂದು ಆದೇಶದಲ್ಲಿ ತಿಳಿಸಿದ್ದಾರೆ.

## ಒಂದೇ ವರ್ಷದಲ್ಲಿ ಹೇಮಾವತಿ ಅಣೆಕಟ್ಟೆ 3 ಬಾರಿ ಭರ್ತಿ

### 10,369 ಕ್ಯೂಸೆಕ್ ಒಳ ಹರಿವು : 10,320 ಕ್ಯೂಸೆಕ್ ನೀರು ಹೊರಕ್ಕೆ

• ಪ್ರಜೋದಯ ವರದಿ

**ಹಾಸನ:** ಹೇಮಾವತಿ ಜಲಾಶಯ ಉತ್ತಮ ಮಳೆಯಿಂದಾಗಿ ಒಂದೇ ವರ್ಷದಲ್ಲಿ ಮೂರು ಬಾರಿ ಭರ್ತಿಯಾಗಿದೆ. ಜಲಾಶಯ ತುಂಬಿದ ಹಿನ್ನಲೆಯಲ್ಲಿ ಹೆಚ್ಚುವರಿ ನೀರನ್ನು ನದಿಗೆ ಹರಿಸಲಾಗುತ್ತಿದೆ.

ಗರಿಷ್ಠ 2922 ಅಡಿ ನೀರಿನ ಸಂಗ್ರಹಣಾ ಸಾಮರ್ಥ್ಯ ಹೊಂದಿರುವ ಅಣೆಕಟ್ಟೆಯಲ್ಲಿ ಮಂಗಳವಾರ ಬೆಳಿಗ್ಗೆ 6 ಗಂಟೆ ವೇಳೆಗೆ 2922 ಅಡಿ ನೀರು ಸಂಗ್ರಹವಾಗಿದೆ. ಅಣೆಕಟ್ಟೆಯಲ್ಲಿ ಒಟ್ಟು 37.103 ಟಿಎಂಸಿ ನೀರು ಸಂಗ್ರಹವಾಗಿದೆ. ಜಲಾಶಯಕ್ಕಿಂದು ಒಟ್ಟು 10,369 ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, ನದಿಗೆ 7290, ಎಡದಂಡೆ ನಾಲೆ 2630 ಕ್ಯೂಸೆಕ್ ಸೇರಿ ಒಟ್ಟಾರೆ 10,320 ಕ್ಯೂಸೆಕ್ ನೀರನ್ನು ಹೊರ ಬಿಡಲಾಗುತ್ತಿದೆ.



ಪ್ರಸಕ್ತ ವರ್ಷದಲ್ಲಿ ಪೂರ್ವ ಮುಂಗಾರು ಉತ್ತಮವಾಗಿ ದ್ದರಿಂದ ಹೇಮಾವತಿ ಅಣೆಕಟ್ಟೆಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಸಂಗ್ರಹವಾಗಿತ್ತು. ಈ ನಡುವೆ ಮೇ ತಿಂಗಳ ಅಂತ್ಯದಿಂದಲೇ ಮುಂಗಾರು ಆರ್ಭಟಿಸಲು ಪ್ರಾರಂಭವಾಗಿದ್ದರಿಂದ ಜುಲೈ ಮೊದಲ ವಾರದಲ್ಲೇ ಜಲಾಶಯ ಮೊದಲ ಬಾರಿಗೆ ಭರ್ತಿಯಾಯಿತು. ಇದಕ್ಕೂ ಮೊದಲೇ ವಾಟೇಹೊಳೆ, ಯಗಚಿ ಜಲಾಶಯ ಭರ್ತಿಯಾಗಿ ಹೊರ ಹರಿವು ಬಂದಿದ್ದರಿಂದ ಹೇಮಾವತಿ ಅಣೆಕಟ್ಟೆಯಿಂದ ಹೆಚ್ಚಿನ ಪ್ರಮಾಣದ ನೀರನ್ನು ಹೊರ ಬಿಡಲಾಗಿತ್ತು. ಜುಲೈ ಅಂತ್ಯ ಹಾಗು ಆಗಸ್ಟ್ ಮೊದಲ ವಾರದಲ್ಲಿ ಮಳೆ ಆರ್ಭಟ ಜೋರಾಗಿದ್ದರಿಂದ ಮತ್ತೊಮ್ಮೆ ಭರ್ತಿಯಾಯಿತು.

ಇನ್ನೇನು ಮುಂಗಾರು ಮುಕ್ತಾಯಗೊಂಡು ಹಿಂಗಾರು ಆರಂಭವಾಗಬೇಕೆನ್ನುವಷ್ಟರಲ್ಲಿ ವಾಯುಭಾರ ಕುಸಿತದಿಂದ ಕಳೆದ 15 ದಿನಗಳಿಂದ ಆಗಾಗ್ಗೆ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ಮತ್ತೊಮ್ಮೆ ಜಲಾಶಯ ಭರ್ತಿಯಾಗಿ ನೀರನ್ನು ಹೊರಬಿಡಲಾಗುತ್ತಿದೆ.

ಈ ವರ್ಷ ಜಲಾಶಯ ಮೂರು ಬಾರಿ ಭರ್ತಿಯಾದರೂ ಸರ್ಕಾರ ಅಣೆಕಟ್ಟೆಗೆ ಬಾಗಿನ ಅರ್ಪಿಸದೆ, ಜಿಲ್ಲೆಯ ಜೀವನಾಡಿಯನ್ನು ಕಡೆಗಣಿಸಿರುವುದು ರೈತರು, ಜಿಲ್ಲೆಯ ಜನರ ಅಸಮಾಧಾನಕ್ಕೆ ಕಾರಣವಾಗಿದೆ.

# ಪರಿಸರ ಸಂರಕ್ಷಣೆ, ಸುಸ್ಥಿರ ಸಮಾಜ ಉಳಿವಿಗೆ ಪಣ ತೊಡೋಣ

### ಜನರು ಎಚ್ಚೆತ್ತುಕೊಳ್ಳದಿದ್ದರೆ ಅಪಾಯ ಕಟ್ಟಿಟ್ಟಬುತ್ತಿ | ಸುವರ್ಣ ಮಹೋತ್ಸವದಲ್ಲಿ ಪಿ.ಎಂ.ನರೇಂದ್ರಸ್ವಾಮಿ ಸಲಹೆ

• ಪ್ರಜೋದಯ ವರದಿ

**ಹಾಸನ :** ಸ್ವಚ್ಛ ಪರಿಸರ ನಮ್ಮೆಲ್ಲರ ನಿಜವಾದ ಆಸ್ತಿ. ಈ ನಿಟ್ಟಿನಲ್ಲಿ ಪರಿಸರ ಸಂರಕ್ಷಣೆಗಾಗಿ ಪ್ರಾಮಾಣಿಕ ಪ್ರಯತ್ನದ ಮೂಲಕ ಸುಸ್ಥಿರ ಸಮಾಜ ಉಳಿವಿಗೆ ಪಣ ತೊಡೋಣವೆಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಅವರು ಹೇಳಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡು 50 ವರ್ಷಗಳಾದ ಹಿನ್ನಲೆಯಲ್ಲಿ ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲಾಡಳಿತದ ವತಿಯಿಂದ ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ ಸುವರ್ಣ ಮಹೋತ್ಸವ ಉದ್ಘಾಟಿಸಿ ಮಾತನಾಡಿದ ಅವರು,




ಕೊರೊನಾ ಸಂದರ್ಭದಲ್ಲಿ ಆಮ್ಲಜನಕದ ಪ್ರಾಮುಖ್ಯತೆ ಜನರಿಗೆ ಅರಿವಾಗಿದೆ. ಆದಾಗ್ಯೂ ಜನರು ಎಚ್ಚೆತ್ತುಕೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಅಪಾಯ ಕಟ್ಟಿಟ್ಟಬುತ್ತಿ. ಕಾರ್ಖಾನೆಗಳು, ಕೈಗಾರಿಕೆಗಳು ಕಲುಷಿತ ನೀರನ್ನು ನದಿಗಳಿಗೆ ಬಿಡುವುದರಿಂದಲೂ ಆಗುತ್ತಿರುವ ಜಲ ಮಾಲಿನ್ಯದ ಬಗ್ಗೆ ಎಲ್ಲರೂ ಎಚ್ಚರ ವಹಿಸಬೇಕೆಂದು ಸಲಹೆ ನೀಡಿದರು.

ಜನರ ಜೀವನಶೈಲಿ ಬದಲಾದಂತೆ ಪ್ರತಿ ಹಂತದಲ್ಲಿ ಕೂಡ ರಾಸಾಯನಿಕಗಳ ಬಳಕೆ ಕಡೆಗೆ ವಾಲುತ್ತಿರುವ ಪ್ರಸ್ತುತ ಸಂದರ್ಭದಲ್ಲಿ ಪರಿಸರದ ರಕ್ಷಣೆ ಬಗ್ಗೆ ಜಾಗೃತಿ ಮೂಡಿಸಲು ಮಾಲಿನ್ಯ ನಿಯಂತ್ರಣ ಮಂಡಳಿ ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ಪರಿಸರ ರಕ್ಷಣೆಗಾಗಿ ಅರಣ್ಯ ಸಂರಕ್ಷಣೆ ಕಾಯ್ದೆ, ವಾಯು ಮಾಲಿನ್ಯ ನಿಯಂತ್ರಣ ಕಾಯ್ದೆ, ರಾಷ್ಟ್ರೀಯ ಅರಣ್ಯ ನೀತಿ, ಪರಿಸರ ನೀತಿ, ಹಲವು ಕಾಯ್ದೆ, ಕಾರ್ಯಕ್ರಮಗಳನ್ನು ರೂಪಿಸಿದ್ದಾರೆ. ದಿನಬಳಕೆ ವಸ್ತುಗಳಲ್ಲಿ ಟನ್ ಗಟ್ಟಲೆ ಪ್ಲಾಸ್ಟಿಕ್ ಭೂಮಿ ಸೇರುತ್ತಿದೆ. ಈ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಕೆಲಸಗಳು ಆಗಬೇಕಿದೆ. ಪರಿಸರ ಸಂರಕ್ಷಣೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುವವರನ್ನು ಗುರುತಿಸಿ, ಅವರಿಗೆ ಉತ್ತೇಜನ ನೀಡುವ ಸಲುವಾಗಿ ಸರ್ಕಾರ ಹಲವು ಪ್ರಶಸ್ತಿಗಳನ್ನು ನೀಡಿ ಗೌರವಿಸಿದೆ ಎಂದರು.


» ನಾಲ್ಕನೇ ಪುಟದಲ್ಲಿ


# ವಿಮಾನ ನಿಲ್ದಾಣ ಹೊರಗೆ ರಸ್ತೆ ನಿರ್ಮಾಣಕ್ಕೆ ಆಗ್ರಹ

### ಕ್ರಮ ಕೈಗೊಳ್ಳದಿದ್ದರೆ ಕಾಂಪೌಂಡ್ ಉರುಳಿಸಿ ಪ್ರತಿಭಟನೆ : ಆರ್.ಪಿ.ವೆಂಕಟೇಶ್‌ಮೂರ್ತಿ

• ಪ್ರಜೋದಯ ವರದಿ

**ಹಾಸನ:** ಬೂವನಹಳ್ಳಿ ವಿಮಾನ ನಿಲ್ದಾಣ ಸುತ್ತ ನಿರ್ಮಾಣ ಮಾಡಿರುವ ಕಾಂಪೌಂಡ್ ಹೊರಗೆ ಕನಿಷ್ಠ 30 ಅಡಿ ರಸ್ತೆ ನಿರ್ಮಿಸಿಕೊಡಲು ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಹಾಗು ರೈತರಿಗೆ ಪರಿಹಾರ ವಿತರಿಸಬೇಕೆಂದು ಹಿರಿಯ ಪತ್ರಕರ್ತ ಆರ್.ಪಿ.ವೆಂಕಟೇಶ್ ಮೂರ್ತಿ ಅವರು ಒತ್ತಾಯಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಪೌಂಡ್ ಗೋಡೆಗಳು ಮನೆಗಳ ಅಂಗಳದ ವರೆಗೂ ಬಂದಿವೆ. ರೈತರು ತಮ್ಮ ಹೊಲಗಳಿಗೆ ಹೋಗುತ್ತಿದ್ದ ಕಾಲುದಾರಿ, ಬಂಡಿದಾರಿ ಬಂದ್ ಆಗಿವೆ. ದ್ಯಾವಲಾಪುರ ಮತ್ತು ಬೂವನಹಳ್ಳಿ ನಡುವಿನ ರಸ್ತೆ ಕೂಡ ಬಂದ್ ಆಗಿದೆ. ಗಾಡೇನಹಳ್ಳಿ, ಮೆಳಗೋಡು, ಚೌರಿ ಕೊಪ್ಪಲು, ಚಟ್ಟನಹಳ್ಳಿ ಹಳ್ಳಿಗಳ ಜನರು ನಗರಕ್ಕೆ ಬರುವುದು ಕಷ್ಟವಾಗಿದೆ. ಹೀಗಾಗಿ 15 ದಿನಗಳೊಳಗೆ ರಸ್ತೆ ನಿರ್ಮಿಸದಿದ್ದರೆ ಕಾಂಪೌಂಡ್ ಬೀಳಿ ಸ ಬೇಕಾಗುತ್ತದೆ ಎಂದು ಎಚ್ಚರಿಸಿದರು.




ವಿಮಾನ ನಿಲ್ದಾಣ ಆಗಬೇಕೆಂಬುದು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರ ದಶಕಗಳ ಕನಸು. 1980 ರಿಂದ 1994 ಹಾಗೂ 1996ರ ನಂತರ ಹಂತ ಹಂತವಾಗಿ ವಿಮಾನ ನಿಲ್ದಾಣ ರೂಪ ಪಡೆಯುತ್ತಾ ಬಂದಿದೆ. ಆದರೂ ಈವರೆಗೂ ಹಾರುವ ಕನಸು ನನಸಾಗಿಯೇ ಇಲ್ಲವೆಂದು ಬೇಸರ ಹೊರ ಹಾಕಿದರು.

ದೇವೇಗೌಡ ಅವರು ಅಧಿಕಾರದಲ್ಲಿದ್ದಾಗಲೂ, ಇಲ್ಲದಾಗಲೂ ಈ ಯೋಜನೆ ಪ್ರಸ್ತಾಪ ಬಿಡಲಿಲ್ಲ. ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ಹೆಚ್ಚುವರಿ ಭೂಮಿ ಕೇಳಿದ ಬಳಿಕ ಜಿಲ್ಲಾಡಳಿತ 536 ಎಕರೆ ಜಮೀನು ಸ್ವಾಧೀನ ಪಡಿಸಿತು. ಸರ್ಕಾರ ನೀಡಿದ ಜಾಗದ ಸುತ್ತ ಎತ್ತರದ ಗೋಡೆ ಮತ್ತು ಮುಳ್ಳಿನ ತಂತಿಯ ಸರಪಳಿಯನ್ನೂ ನಿರ್ಮಿಸಲಾಗಿದೆ. ಕೆಲಸ ಮುಗಿದು ವರ್ಷಗಳೇ ಕಳೆದರೂ, ವಿಮಾನಗಳ ಹಾರಾಟ ಕಾಣಿಸಲಿಲ್ಲ. ದ್ಯಾವಲಾಪುರ, ಮೈಲನಹಳ್ಳಿ, ತೆಂಡೇಹಳ್ಳಿ,


» ನಾಲ್ಕನೇ ಪುಟದಲ್ಲಿ


## ಸಿದ್ದರಾಮಯ್ಯ ಸಿಎಂ ಅವಧಿಗೆ ಡೆಡ್‌ಲೈನ್ ನೀಡಿಲ್ಲ: ಪರಮೇಶ್ವರ್

• ಪ್ರಜೋದಯ ವರದಿ

**ಬೆಂಗಳೂರು :** 2023ರ ವಿಧಾನಸಭಾ ಚುನಾವಣೆಯ ನಂತರ ಮುಖ್ಯಮಂತ್ರಿಯಾಗಲು ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಶಾಸಕಾಂಗ ಪಕ್ಷದ(ಸಿಎಲ್‌ಪಿ) ನಾಯಕರಾಗಿ ಆಯ್ಕೆ ಮಾಡಿದಾಗ, ಅವರ ಅವಧಿಗೆ ಯಾವುದೇ ಸಮಯ ನಿಗದಿಪಡಿಸಿಲ್ಲವೆಂದು ಗೃಹ ಸಚಿವ ಜಿ. ಪರಮೇಶ್ವರ ಅವರು ಮಂಗಳವಾರ ಹೇಳಿದ್ದಾರೆ.

ಪಕ್ಷದ ಪ್ರತಿಯೊಬ್ಬರೂ ಹೈಕಮಾಂಡ್ ನಿರ್ಧರಿಸುವ ಯಾವುದೇ ನಿರ್ಧಾರಕ್ಕೆ ಬದ್ಧರಾಗಿರುತ್ತಾರೆ ಮತ್ತು ಮುಖ್ಯಮಂತ್ರಿ ಬದಲಾವಣೆ ಗೊಂದಲಕ್ಕೆ ಅಂತ್ಯ ಹಾಡ ಬೇಕೆಂದು ಕಾಂಗ್ರೆಸ್ ಹೈಕಮಾಂಡ್‌ಗೆ ಒತ್ತಾಯಿಸಿದರು.

## ಲಾರಿ ಮುಗುಚಿ ಬಿದ್ದು ದನಗಾಯಿ ಸಾವು

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಚಾಲಕನ ನಿಯಂತ್ರಣ ತಪ್ಪಿ ಇಟ್ಟಿಗೆ ಸಾಗಿಸುತ್ತಿದ್ದ ಲಾರಿ ದನ ಮೇಯಿಸುತ್ತಿದ್ದ ವ್ಯಕ್ತಿ ಮೇಲೆ ಮಗುಚಿ ಬಿದ್ದು, ಆತ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಸಂತೇಶಿವರ ಗೇಟ್ ಬಳಿ ನಡೆದಿದೆ. ಲಾರಿ ಕ್ಲೀನರ್ ಕೂಡ ಗಾಯಗೊಂಡಿದ್ದಾನೆ.

ತಾಲ್ಲೂಕಿನ ಸಂತೇಶಿವರ ಗ್ರಾಮದ ಬೋರಯ್ಯ(60) ಅಪಘಾತದಲ್ಲಿ ಮೃತಪಟ್ಟ ವ್ಯಕ್ತಿ. ಲಾರಿ ಕ್ಲೀನರ್ ಗುರುಮೂರ್ತಿ ಗಾಯಗೊಂಡಿದ್ದಾನೆ. ಹುಳಿಯಾರ್ ಕೆಂಕೆರೆ ವ್ಯಾಪ್ತಿಯಿಂದ ಸಂತೇಶಿವರ ಗ್ರಾಮಕ್ಕೆ ಲಾರಿಯಲ್ಲಿ ಇಟ್ಟಿಗೆಗಳನ್ನು ಸಾಗಿಸುತ್ತಿದ್ದ ವೇಳೆ ರಸ್ತೆ ಕಡೆಗೆ ವಾಲಿರುವ ಮರದ ಕೊಂಬೆಯನ್ನು ತಪ್ಪಿಸುವ ಸಲುವಾಗಿ ಲಾರಿಯನ್ನು ಚಾಲಕ ರಸ್ತೆ ಬದಿಗೆ ತಿರುಗಿಸಿದ್ದಾನೆ. ವೇಗದಲ್ಲಿದ್ದ ಲಾರಿಯೂ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಗೆ ಉರುಳಿ ಬಿದ್ದಿದೆ. ರಸ್ತೆ ಬದಿಯಲ್ಲಿ ಜಾನುವಾರುಗಳನ್ನು ಮೇಯಿಸುತ್ತಿದ್ದ ಬೋರಯ್ಯ ಲಾರಿಯ ಕೆಳಭಾಗಕ್ಕೆ ಸಿಲುಕಿ ಸ್ಥಳದಲ್ಲಿಯೇ ಮೃತ ಪಟ್ಟಿದ್ದಾರೆ.



ಘಟನೆ ಸಂಭವಿಸುತ್ತಿದ್ದಂತೆಯೇ ಲಾರಿ ಚಾಲಕ ಓಡಿ ಹೋಗಿದ್ದಾನೆ. ವ್ಯಕ್ತಿ ಸಿಲುಕಿರುವುದನ್ನು ನೋಡಲು ಬಂದ ಕ್ಲೀನರ್ ಗುರುಮೂರ್ತಿ ಇಟ್ಟಿಗೆ ನಡುವೆ ಕಾಲುಗಳು ಸಿಲುಕಿಕೊಂಡು ಗಾಯಗೊಂಡಿದ್ದಾನೆ.

ಸ್ಥಳೀಯರು ಕ್ರೇನ್ ಮೂಲಕ ಲಾರಿಯನ್ನು ಮೇಲೆತ್ತಿ ಬೋರಯ್ಯ ಅವರ ಮೃತ ದೇಹವನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ಶವಾಗಾರಕ್ಕೆ ಸಾಗಿಸಲಾಗಿದ್ದು ಗಾಯಗೊಂಡಿರುವ ಗುರುಮೂರ್ತಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ತಾಲ್ಲೂಕಿನ ನುಗ್ಗೇಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಫ್ರಿಡ್ಜ್ ಸ್ಫೋಟ: ಮನೆ ವಸ್ತುಗಳಿಗೆ ಹಾನಿ

• ಪ್ರಜೋದಯ ವರದಿ

**ಹೊಳೆನರಸೀಪುರ:** ಫ್ರಿಡ್ಜ್ ಸ್ಫೋಟಗೊಂಡು ಕೆಲ ಹೊತ್ತು ಗ್ರಾಮಸ್ಥರಲ್ಲಿ ಆತಂಕ ಸೃಷ್ಟಿಯಾಗಿದ್ದ ಘಟನೆ ತಾಲ್ಲೂಕಿನ ಮಲ್ಲಪ್ಪನಹಳ್ಳಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ನಿಂಗರಾಜು ಎಂಬುವವರ ಮನೆಯಲ್ಲಿ ಯಾರು ಇಲ್ಲದ ವೇಳೆ ಫ್ರಿಡ್ಜ್ ಸ್ಫೋಟಗೊಂಡು ಸುಟ್ಟು ಕರಕಲಾಗಿದೆ. ಯಾವುದೇ ಅಪಾಯ ಸಂಭವಿಸಿಲ್ಲ.

ನಿಂಗರಾಜು ಅವರ ಪತ್ನಿ ಸಂಬಂಧಿಕರ ಮನೆಯ ಗೃಹಪ್ರವೇಶಕ್ಕೆ ತೆರಳಿದ್ದ ಕಾರಣ ಮನೆಗೆ ಬೀಗ ಹಾಕಿಕೊಂಡು ಜಮೀನಿನಲ್ಲಿ ಹಸುಗಳಿಗೆ ಜೋಳದ ಕಡ್ಡಿ ತರಲು ಹೋಗಿದ್ದರು. ಈ ವೇಳೆ ಫ್ರಿಜ್ ಸ್ಫೋಟಗೊಂಡು ಮನೆ ಹೆಂಚುಗಳು ಹಾರಿಹೋಗಿವೆ. ಈ ಸಂದರ್ಭದಲ್ಲಿ ಅಕ್ಕಪಕ್ಕದ ಮನೆಯವರು ಹೆದರಿ ಅಗ್ನಿ ಶಾಮಕ ಠಾಣೆಗೆ ಕರೆ ಮಾಡಿ ಮಾಹಿತಿ ನೀಡಿದ್ದಾರೆ. ತಕ್ಷಣ ಸ್ಥಳಕ್ಕೆ



ಆಗಮಿಸಿದ ಅಗ್ನಿಶಾಮಕರು ಬೆಂಕಿ ನಂದಿಸಿ, ಹೆಚ್ಚಿನ ಅನಾಹುತ ಘಟಿಸದಂತೆ ಕ್ರಮಕೈಗೊಂಡಿದ್ದಾರೆ. ಮನೆಯಲ್ಲಿದ್ದ ವಸ್ತುಗಳು ಹಾಗು ಮನೆ ಕಪ್ಪು ಮಸಿಯಂತಾಗಿದೆ. ಅದೃಷ್ಟವಶಾತ್ ಗ್ಯಾಸ್ ಸಿಲಿಂಡರ್ ಹಾಗು ಇತರೆ ವಸ್ತುಗಳಿಗೆ ಬೆಂಕಿ ತಾಗದೇ ಇರುವುದು ಸಮಾಧಾನ ಮೂಡಿಸಿದೆ.

## 89 ಗ್ರಾಂ ಚಿನ್ನ, 670 ಗ್ರಾಂ ಬೆಳ್ಳಿ ಕಳವು

**ಹಾಸನ:** ಮನೆಯ ಬಾಗಿಲು ಮುರಿದು ಒಳ ನುಗ್ಗಿದ ಕಳ್ಳರು ಬೀರುವಿನಲ್ಲಿದ್ದ 89 ಗ್ರಾಂ ಚಿನ್ನಾಭರಣ ಹಾಗು 670 ಗ್ರಾಂ ಬೆಳ್ಳಿ ವಸ್ತುಗಳನ್ನು ಕಳವು ಮಾಡಿರುವ ಘಟನೆ ನಗರದ ಗೌರಿಕೊಪ್ಪಲು ಬಡಾವಣೆಯಲ್ಲಿ ನಡೆದಿದೆ.

ಬಡಾವಣೆ ನಿವಾಸಿ ತಿಮ್ಮೇಗೌಡ ಅ.25 ರಂದು ಮನೆಯ ಬೀಗ ಹಾಕಿಕೊಂಡು ಕುಟುಂಬದೊಂದಿಗೆ ಹೊಳೆನರಸೀಪುರಕ್ಕೆ ಹೋಗಿದ್ದರು. ಮರುದಿನ ಬಂದು ನೋಡಿದಾಗ ಬೀರುವಿನಲ್ಲಿಟ್ಟಿದ್ದ 89 ಗ್ರಾಂ ನ ಚಿನ್ನ, 670 ಗ್ರಾಂ. ಬೆಳ್ಳಿಯ ವಸ್ತುಗಳನ್ನು ಕಳವು ಮಾಡಿದ್ದಾರೆ. ಬಡಾವಣೆ ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ.

### ಹವಾಮಾನ ವೈಪರೀತ್ಯದಿಂದ ಕಟಾವಿಗೆ ಅಡ್ಡಿ | ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ ರೈತರ ಪಾಡು

# ಬಿಳಿಸುಳಿ ರೋಗದಿಂದ ಬಚಾವಾಗಿದ್ದ ಜೋಳ ಮಳೆ ಪಾಲು

• ಪ್ರಜೋದಯ ವರದಿ

**ಹಾಸನ:** ಬಿಳಿಸುಳಿ ರೋಗ ಬಾಧೆಗೆ ಸಿಲುಕಿ ಅಪಾರ ಪ್ರಮಾಣದ ಮುಸುಕಿನ ಜೋಳ ಕಳೆದುಕೊಂಡಿರುವ ರೈತರು, ಶ್ರಮವಹಿಸಿ ಉಳಿಸಿಕೊಂಡಿರುವ ಅಲ್ಪ ಫಸಲು ಕಟಾವಿಗೆ ಹವಾಮಾನ ವೈಪರೀತ್ಯ, ನಿರಂತರ ಮಳೆ ಅಡ್ಡಿಯುಂಟು ಮಾಡಿದೆ.

ಸಾಮಾನ್ಯವಾಗಿ ಅಕ್ಟೋಬರ್ ತಿಂಗಳಿಗೆ ಮುಂಗಾರು ಅಂತ್ಯಗೊಳ್ಳಬೇಕಿತ್ತು. ಆದರೆ, ವಾಯುಭಾರ ಕುಸಿತದಿಂದ ಜಿಲ್ಲೆಯಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ಕೃಷಿ ಚಟುವಟಿಕೆಗೆ ತೊಂದರೆ ಎದುರಾಗಿದೆ. ಮೆಕ್ಕೆಜೋಳ ಕಟಾವು ಕಾಲವಾಗಿರುವ ಈ ಸಂದರ್ಭದಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ, ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ.

ಅಲ್ಪಾವಧಿ ಬೆಳೆಯಾಗಿರುವ ಮುಸುಕಿನ ಜೋಳವನ್ನು ಹಾಸನ, ಹೊಳೆನರಸೀಪುರ, ಆಲೂರು, ಬೇಲೂರು, ಚನ್ನರಾಯಪಟ್ಟಣ ಮತ್ತು ಅರಕಲಗೂಡು ತಾಲ್ಲೂಕುಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬೆಳೆಯಲಾಗುತ್ತದೆ. ಆದರೆ, ಈ ಬಾರಿ ಹೆಚ್ಚು ಮಳೆಯ ಕಾರಣದಿಂದ ಬಿಳಿಸುಳಿ ರೋಗ ವ್ಯಾಪಕವಾಗಿ ಹರಡಿದ್ದರಿಂದ ಅಪಾರ ಪ್ರಮಾಣದ ಬೆಳೆ ನಾಶವಾಗಿತ್ತು.



ಬಿತ್ತನೆ ಮಾಡಿದ್ದ ಜೋಳ ಮೊಳಕೆ ಬಾರದೆ ಇದ್ದರಿಂದ ಪುನಃ ಉಳುಮೆ ಮಾಡಿ ಬಿತ್ತನೆ ಮಾಡಲಾಗಿತ್ತು. ಅದು ಕೂಡ ಅರ್ಧದಷ್ಟು ನಾಶವಾಗಿದೆ. ಜಿಲ್ಲೆಯಲ್ಲಿ ಕಾಡ್ಗಿಚ್ಚಿನಂತೆ ಹರಡಿದ್ದ ಬಿಳಿಸುಳಿ ರೋಗ ರೈತರನ್ನು ತೀವ್ರವಾಗಿ ಕಂಗೆಡಿಸಿದ್ದರಿಂದ ಅಧ್ಯಯನಕ್ಕಾಗಿ ರಾಜ್ಯ, ಹೊರ ರಾಜ್ಯಗಳ ಕೃಷಿ ಸಂಶೋಧಕರು, ತಜ್ಞರ ತಂಡ ಜಿಲ್ಲೆಗೆ ಆಗಮಿಸಿ ಪರಿಶೀಲನೆ ನಡೆಸಿತ್ತು. ಹವಮಾನ ವೈಪರೀತ್ಯ, ಭಾರೀ ಮಳೆ, ಶೀತದ ವಾತಾವರಣ, ಫಂಗಸ್‌ನಿಂದ ರೋಗ ಹರಡಿದೆ. ಮುಂದಿನ ದಿನಗಳಲ್ಲಿ ಜೋಳ ಬೆಳೆಯುವುದು ಸೂಕ್ತವಲ್ಲ, ಪರ್ಯಾಯ ಬೆಳೆಯತ್ತ ರೈತರು ಗಮನ ಹರಿಸಬೇಕೆಂದು ಆತಂಕಕಾರಿ ವರದಿ ನೀಡಿತ್ತು.

#### ಫಂಗಸ್ ರೋಗದ ಆತಂಕ

ನಿರಂತರ ಮಳೆಯಿಂದ ತೇವಾಂಶ ಹೆಚ್ಚಾಗಿ ಹಲವೆಡೆ ಫಂಗಸ್ ರೋಗ ಕಾಣಿಸಿಕೊಂಡಿದೆ. ಇದರ ಪರಿಣಾಮವಾಗಿ ಜೋಳದ ಕಾಳುಗಳು ಕಪ್ಪಾಗುತ್ತಿದ್ದು, ಗುಣಮಟ್ಟ ಕಳೆದುಕೊಳ್ಳುವ ಭೀತಿ ಎದುರಾಗಿದೆ. ಬಿಸಿಲು ಇಲ್ಲದೆ ಕಟಾವು ಮಾಡಿರುವ ಜೋಳ ಒಣಗಿಸಲು ಸಾಧ್ಯವಾಗುತ್ತಿಲ್ಲ. ಮಳೆ ನಿಂತು ಬಿಸಿಲು ಕಾಣದ ಪರಿಣಾಮ ಜೋಳದ ಬೆಳೆ ಜಮೀನಿನಲ್ಲೇ ಮೊಳಕೆ ಒಡೆಯುವ ಸ್ಥಿತಿಗೆ ಬಂದಿದೆ. ಇದರಿಂದ ನಷ್ಟ ಸಂಭವಿಸುವ ಭೀತಿ ಇದೆ. ಮಳೆ ಹೀಗೆಯೇ ಮುಂದುವರೆದರೆ ಬೆಳೆ ನಷ್ಟದ ಪ್ರಮಾಣ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ಬೆಳೆ ಹಾನಿಯಾಗಿರುವ ಪ್ರದೇಶಕ್ಕೆ ಅಧಿಕಾರಿಗಳು ಭೇಟಿ ನೀಡಿ ಪರಿಹಾರ ನೀಡಬೇಕೆಂದು ರೈತರು ಒತ್ತಾಯಿಸಿದ್ದಾರೆ.

ಈ ಎಲ್ಲಾ ಬೆಳವಣಿಗೆ ಸವಾಲುಗಳ ನಡುವೆಯೂ ರೈತರು, ಕಷ್ಟಪಟ್ಟು ಉಳಿಸಿಕೊಂಡಿರುವ ಅಲ್ಪ ಫಸಲನ್ನು ಕಟಾವು ಮಾಡಬೇಕೆನ್ನುವಷ್ಟರಲ್ಲಿ ಮಳೆ ಸುರಿಯುತ್ತಿರುವುದರಿಂದ ರೈತರು ತಲೆ ಮೇಲೆ ಕೈಹೊತ್ತು ಕೂರುವಂತಾಗಿದೆ.

#### ಮೊಳಕೆ ಒಡೆಯುವ ಆತಂಕ

ಮೆಕ್ಕೆ ಜೋಳ ಬಿತ್ತನೆ ಮಾಡಿ ಐದು ತಿಂಗಳು ಕಳೆದಿರುವುದರಿಂದ ಜೋಳದ ತೆನೆ ಒಣಗಿದ್ದು, ಸರಿಯಾದ ಸಮಯದಲ್ಲಿ ಕಟಾವು ಮಾಡದಿರುವುದರಿಂದ ಗಿಡದಲ್ಲೇ ಮೊಳಕೆ ಒಡೆಯುವ ಆತಂಕ ಎದುರಾಗಿದೆ. ಜೋಳ ಬಿತ್ತನೆ ಮಾಡಿದ ಸುಮಾರು ನಾಲ್ಕು ತಿಂಗಳ ನಂತರ ತೆನೆಗಳನ್ನು ಕಟಾವು ಮಾಡಬೇಕು. ಬಿತ್ತನೆ ಮಾಡಿದ ಸಂದರ್ಭದಲ್ಲಿ ಭಾರೀ ಮಳೆಗೆ ತುತ್ತಾಯಿತು. ನಂತರದ ದಿನಗಳಲ್ಲಿ ಅಳಿದುಳಿದು ಹುಟ್ಟಿದ ಜೋಳಕ್ಕೆ ರೋಗರುಜಿನಗಳು ಎದುರಾಯಿತು. ಗೊಬ್ಬರ, ಕೀಟನಾಶಕಗಳನ್ನು ಸಿಂಪಡಿಸಿ ಗಿಡಗಳನ್ನು ಉಳಿಸಿಕೊಂಡರು. ಇನ್ನೇನು ಕಟಾವು ಮಾಡಬೇಕೆನ್ನುವ ಸಮಯದಲ್ಲಿ ಚಂಡಮಾರುತದ ಹೊಡೆತಕ್ಕೆ ಸಿಲುಕಿರುವ ಮೆಕ್ಕೆ ಜೋಳ ಬೆಳೆದ ರೈತರು ಅತಂತ್ರ ಪರಿಸ್ಥಿತಿಗೆ ಸಿಲುಕಿದ್ದಾರೆ.

## ಶೀಘ್ರ ಕಡತ ವಿಲೇವಾರಿಗೆ ಡಿ.ಸಿ.ಸೂಚನೆ

• ಪ್ರಜೋದಯ ವರದಿ

**ಹಾಸನ:** ಹಾಸನಾಂಬ ಜಾತ್ರಾ ಮಹೋತ್ಸವ ಹಿನ್ನಲೆಯಲ್ಲಿ ಎರಡು ವಾರಗಳ ಕಾಲ ವಿಲೇವಾರಿಗೆ ಬಾಕಿ ಇರುವಂತಹ ಕಡತಗಳನ್ನು ಶೀಘ್ರ ವಿಲೆಗಾಗಿ ಆಂದೋಲನದ ರೀತಿಯಲ್ಲಿ ಕ್ರಮವಹಿಸುವಂತೆ ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮಳೆಯಿಂದ ಹಾನಿಯಾಗಿರುವ ಬೆಳೆ ನಷ್ಟ, ಶಾಲೆ, ಅಂಗನವಾಡಿ ಕಟ್ಟಡಗಳ ಹಾನಿಯ ಬಗ್ಗೆ ಮಾಹಿತಿ ಸಿದ್ಧಪಡಿಸಿ ವರದಿ ನೀಡಬೇಕು. ಪ್ರತಿ ಹಾಸ್ಟೆಲ್‌ಗೆ ನೋಡಲ್ ಅಧಿಕಾರಿಯನ್ನು ನೇಮಿಸಿ ಅನಿರೀಕ್ಷಿತ ಭೇಟಿ ನೀಡಿ ಮಕ್ಕಳ ಸುರಕ್ಷತೆ, ಆಹಾರದ ಗುಣಮಟ್ಟ, ಮೂಲಭೂತ ಸೌಕರ್ಯಗಳ ಬಗ್ಗೆ ಪರಿಶೀಲಿಸಿ ವರದಿ ನೀಡಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಹಾಸನಾಂಬ ಜಾತ್ರಾ ಮಹೋತ್ಸವದಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು ಜವಾಬ್ದಾರಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಿ ಜಾತ್ರಾ ಮಹೋತ್ಸವವನ್ನು ಯಶಸ್ವಿಗಳಿಸಿದ್ದಾರೆ. ಹೊರ ಜಿಲ್ಲೆಯಿಂದ ಆಗಮಿಸಿದ್ದ ಭಕ್ತರು ತಮಗೆ ಫೋನ್ ಕರೆ ಮೂಲಕ ತಿಳಿಸಿದ್ದಾರೆಂದು ಜಿಲ್ಲಾಧಿಕಾರಿ ಪ್ರಶಂಸೆ ವ್ಯಕ್ತಪಡಿಸಿದರು.

# ಹಲವು ಅಭಿವೃದ್ಧಿ ಕಾಮಗಾರಿಗೆ ಸಂಸದ ಭೂಮಿಪೂಜೆ

• ಪ್ರಜೋದಯ ವರದಿ

**ಹಾಸನ:** ಸಂಸದ ಶ್ರೇಯಸ್ ಪಟೇಲ್ ಅವರು ಮಂಗಳವಾರ ಸಂಸದರ ಸ್ಥಳೀಯ ಕ್ಷೇತ್ರಾಭಿವೃದ್ಧಿ ಅನುದಾನದಡಿ ವಿವಿಧ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ಕಬ್ಬಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಬಳಿಕ ದುದ್ದ ಹೋಬಳಿ ಗೌರಿಪುರ ಹಾಗು ಮಹದೇವರಹಳ್ಳಿ ರಸ್ತೆ ಕಾಮಗಾರಿಗೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಗ್ರಾಮೀಣ ಭಾಗದ ರಸ್ತೆಗಳು ಅಭಿವೃದ್ಧಿಗೆ ಪೂರಕವಾಗಿದೆ. ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ದಿಟ್ಟ ಕ್ರಮ ಕೈಗೊಳ್ಳಲಾಗಿದೆ. ನಿಗದಿತ ಗಡುವಿನೊಳಗೆ ಗುಣಮಟ್ಟದ ರಸ್ತೆ ನಿರ್ಮಿಸಿಕೊಡುವಂತೆ ಗುತ್ತಿಗೆದಾರರು ಹಾಗೂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ದುದ್ದ ಹೋಬಳಿ ಬಸವಾಘಟ್ಟ ಗ್ರಾಮ ಪಂಚಾಯಿತಿಗೆ ಒಳಪಡುವ ಚಿಗಟಿಹಳ್ಳಿಯಲ್ಲಿ ಸಿಸಿ ಮುಖ್ಯ ರಸ್ತೆ, ಬಸವಾಘಟ್ಟ ರಸ್ತೆ ಹಾಗು ಬೈರಾಪುರ ಸಮುದಾಯ ಭವನದ ಅಡುಗೆ



ಮನೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ನಾನು ಗ್ರಾಮಗಳಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಸಾರ್ವಜನಿಕರು ಈ ಬಗ್ಗೆ ಗಮನಕ್ಕೆ ತಂದಿದ್ದರು. ಜೊತೆಗೆ ಬೈರಾಪುರದಲ್ಲಿ ಸಮುದಾಯ ಭವನ ಇದ್ದರೂ ಅಡುಗೆ ಮನೆ ಇಲ್ಲದೆ ತೊಂದರೆಯಾಗುತ್ತಿತ್ತು. ಈ ಕಾಮಗಾರಿ ಕೈಗೊಂಡಿರುವುದರಿಂದ ಮುಂದಿನ ದಿನಗಳಲ್ಲಿ ಮದುವೆ, ಶುಭ ಸಮಾರಂಭಗಳಿಗೆ ನೆರವಾಗುತ್ತದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಕಾಮಗಾರಿ ಕೈಗೆತ್ತಿಕೊಂಡಿದ್ದು, ಶೀಘ್ರ ಬಳಕೆಗೆ ಲಭ್ಯವಾಗಲಿದೆ ಎಂದು ಭರವಸೆ ನೀಡಿದರು.

ದುದ್ದ ಹೋಬಳಿ ಅಟ್ಟಾವರ ಹೊಸಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಮ್ಮಾಪುರ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣ, ಎಂ.ಡಿ.ಹೊಸೂರು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಹಾಗು ಮುದಿಗೆರೆಯಲ್ಲಿ ಅಂಗನವಾಡಿ ಕಟ್ಟಡ ಕಾಮಗಾರಿ ಕೈಗೊಳ್ಳಲಾಯಿತು. ಮೆಳಗೋಡು ಗ್ರಾಮ ಪಂಚಾಯಿತಿಗೆ ಸೇರುವ ಚೌರಿಕೊಪ್ಪಲು ಗ್ರಾಮದಲ್ಲಿ ಸಮುದಾಯ ಭವನ ನಿರ್ಮಾಣ, ಕೋರವಂಗಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಕ್ಕೇನಹಳ್ಳಿ ಗ್ರಾಮದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಈ ವೇಳೆ ಪಕ್ಷದ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಹಾರನಹಳ್ಳಿ ಕೆರೆ ಕೋಡಿ: ಗಂಗಾಪೂಜೆ

• ಪ್ರಜೋದಯ ವರದಿ

**ಹಾರನಹಳ್ಳಿ:** ಇಲ್ಲಿನ ಇತಿಹಾಸ ಪ್ರಸಿದ್ಧ ಹಾರನಹಳ್ಳಿ ಕೆರೆ ಕೋಡಿ ಬಿದ್ದಿದ್ದರಿಂದ ಮಂಗಳವಾರ ಗ್ರಾಮಸ್ಥರಿಂದ ಕೋಡಿಮಠದ ಸಮೀಪ ಇರುವ ಕೆರೆ ಕೋಡಿಯಲ್ಲಿ ಗಂಗಾ ಪೂಜೆ ಭಾಗಿನ ಅರ್ಪಿಸುವ ಕಾರ್ಯಕ್ರಮ ಸಾವಿರಾರು ಗ್ರಾಮಸ್ಥರುಗಳ ಸಮ್ಮುಖದಲ್ಲಿ ವೈಭವದಿಂದ ನಡೆಯಿತು.

ಕೋಡಿಮಠದ ಉತ್ತರಾಧಿಕಾರಿ ಶ್ರೀ ಚೇತನ್ ಮರಿದೇವರು ಕೆರೆ ಪೂಜೆ ಸಲ್ಲಿಸಿ ಭಾಗಿನವನ್ನು ಕೆರೆಗೆ ಸಮರ್ಪಣೆ ಮಾಡಿದ ನಂತರ ಸುಹಾಸಿನಿಯರು ಕೆರೆಗೆ ಮಂಗಳದ್ರವ್ಯದಿಂದ ಪೂಜೆ ಮಾಡಿ ಭಾಗಿನ ಅರ್ಪಿಸಿದರು.

ಕೋಡಿಮಠದ ಉತ್ತರಾಧಿಕಾರಿ ಚೇತನ್ ಮರಿದೇವರು ಮಾತನಾಡಿ ಹಾರನಹಳ್ಳಿ ಕೆರೆ ತನ್ನದೆ ಆದ ಇತಿಹಾಸವಿದೆ. ಈ ಕೆರೆ ಯಲ್ಲಿ ನೀರು ಇದ್ದರೆ ಸುಮಾರು 30 ಹಳ್ಳಿಗಳ ವ್ಯಾಪ್ತಿಯಲ್ಲಿ ಅಂತರ ಜಲ ಹೆಚ್ಚುತ್ತದೆ. ಸಾವಿರಾರು ರೈತರ ಜೀವನಾಡಿ ಈ ಕೆರೆ ಹಿಂದಿನಿಂದಲೂ ಮಂಗಳವಾರ ಶುಕ್ರವಾರ ಈ ಕೆರೆ ಕೋಡಿಬಿಳ್ಳುವುದು



ವಾಡಿಕೆ ಈ ಬಾರಿ ಸೋಮವಾರ ಬಿದ್ದಿದೆ. ಇದರಿಂದ ಈ ಭಾಗದ ಜನರಿಗೆ ಹರ್ಷ ಉಂಟಾಗಿದೆ. ಶ್ರೀ ಗುರು ಎಲ್ಲರಿಗೂ ಒಳ್ಳೆಯದು ಮಾಡಲಿ ಎಂದು ಆಶೀರ್ವದಿಸಿದರು. ಗ್ರಾಮ ದೇವತೆ ಕೊಡಮ್ಮ ದೇವಿ ಯಳವಾರೆ ಹುಚ್ಚಮ್ಮ ದೇವಿ ಶ್ರೀ ಗುರು ಜೇನುಕಲ್ ಸಿದ್ದೇಶ್ವರಸ್ವಾಮಿ ಶ್ರೀ ಸಿದ್ರಾಮೇಶ್ವರ ಸ್ವಾಮಿ ಧೂತರಾಯಸ್ವಾಮಿ. ವೀರಭದ್ರೇಶ್ವರ. ಚಲುವರಾಯಸ್ವಾಮಿ ದೇವರುಗಳಿಗೆ ವಿಶೇಷ ಅಲಂಕಾರ ಮಾಡಿ ಕೊಡಿ ಸಮೀಪ ದೇವರುಗಳನ್ನ ಕುರಿಸಿ ಪೂಜೆ ಮಾಡಿದರು ಭಕ್ತರುಗಳು ದೇವಿಗೆ ಪೂಜೆ ಸಲ್ಲಿಸಿ ಭಕ್ತಿ ಭಾವ ಮೆರದರು. ಭಕ್ತಾದಿಗಳಿಗೆ ದಾಸೋಹ ವ್ಯವಸ್ಥೆ ಮಾಡಲಾಗಿತ್ತು.

ರೇವಣ್ಣ, ಹೆಚ್.ಎಂ.ಮಲ್ಲಿಕಾರ್ಜುನ ಸ್ವಾಮಿ, ದಿವ್ಯಾನಂದ್, ಮಹದೇವಣ್ಣ, ಪ್ರಕಾಶ್, ಪ್ರಭಣ್ಣ, ಸೋಮಣ್ಣ, ಕಿರಣ್, ಮಾದಣ್ಣ, ಸಿದ್ದೇಶ್, ದೀಪಕ್, ಕಿರಣ್, ಶಿವು, ಮಲ್ಲಿಕಣ್ಣ ಸೇರಿದಂತೆ ವಿವಿಧ ಸಮಾಜದ ಮುಖಂಡರು ದೇವರ ಪೂಜಾರುಗಳು, ಗ್ರಾಮಸ್ಥರು ಭಾಗ ವಹಿಸಿದ್ದರು.

## ಸಹಾಯಧನ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಹಾಸನ:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಮತೀಯ ಅಲ್ಪ ಸಂಖ್ಯಾತರಾದ ಮುಸ್ಲಿಂ, ಜೈನ್, ಬೌದ್ಧ, ಸಿಖ್ಖ್ ಹಾಗೂ ಪಾರ್ಸಿ ಜನಾಂಗದವರಿಗೆ 2025-26ನೇ ಸಾಲಿನ ಸಮುದಾಯ ಆಧಾರಿತ ತರಬೇತಿ ಯೋಜನೆ, ಮಹಿಳಾ ಸ್ವ-ಸಹಾಯ ಸಂಘ ಮತ್ತು ಸಾಂತ್ವನ ಯೋಜನೆಗಳಿಗೆ ಸಾಲ ಹಾಗೂ ಸಹಾಯಧನ ಸೌಲಭ್ಯ ಕಲ್ಪಿಸಲು ಆನ್‌ಲೈನ್ ಮೂಲಕ +k aml ɡc+ - l r i -eml ɡ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸಲು ನ.15 ಕೊನೆಯ ದಿನ.

ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಮೌಲಾನಾ ಆಜಾದ್ ಭವನ, 1 ನೇ ಮಹಡಿ, ಸಾಲಗಾಮೆ ಮುಖ್ಯ ರಸ್ತೆ, ಆಕಾಶವಾಣಿ ಕ್ವಾಟ್ರಸ್ ಹಿಂಭಾಗ, ಶ್ರೀ ವಿದ್ಯಾ ಗಣಪತಿ ದೇವಸ್ಥಾನ ಅಡ್ಡ ರಸ್ತೆ, ಮಲ್ನಾಡ್ ಇಂಜಿನೀಯರಿಂಗ್ ಕಾಲೇಜು ಹತ್ತಿರ, ಹಾಸನ. ದೂ. ಸಂಖ್ಯೆ:08172-246333ಗೆ ಸಂಪರ್ಕಿಸಬಹುದೆಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ಮಹಿಳಾ ಸ್ಪಂದನಾ ಕಾರ್ಯಕ್ರಮ

**ಹಾಸನ:** ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ನ.3ರಿಂದ ನ.5ರ ವರೆಗೆ ಹಾಸನ ಜಿಲ್ಲೆಗೆ ಪ್ರವಾಸ ಕೈಗೊಂಡಿದ್ದು, ನ.5ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಮಹಿಳಾ ಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಮಹಿಳೆಯರು ತಮಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಅಹವಾಲುಗಳನ್ನು ಸಲ್ಲಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

# ಮತ ಕಳ್ಳತನ: ಚುನಾವಣಾ ಆಯೋಗದ ಕಣ್ಣು ತೆರೆಸಬೇಕು

• ಪ್ರಜೋದಯ ವರದಿ

**ಸಕಲೇಶಪುರ:** ದೇಶದಲ್ಲಿ ನಡೆಯುತ್ತಿರುವ ಮತ ಕಳ್ಳತನದ ವಿರುದ್ಧವಾಗಿ, ಕಾಂಗ್ರೆಸ್ ಪ್ರದೇಶ ಕಾಂಗ್ರೆಸ್ ಸಮಿತಿಯ ವತಿಯಿಂದ ಸಹಿ ಸಂಗ್ರಹಣಾ ಅಭಿಯಾನದ ಮೂಲಕ ಚುನಾವಣಾ ಆಯೋಗದ ಕಣ್ಣು ತೆರೆಸಬೇಕಿದೆ ಎಂದು ಗ್ಯಾರಂಟಿ ಅನುಷ್ಠಾನ ಯೋಜನೆಯ ತಾಲೂಕು ಅಧ್ಯಕ್ಷ ಮುರಳಿ ಮೋಹನ್ ಹೇಳಿದರು.

ಪಟ್ಟಣದ ಕ್ರಾಪರ್ಡ್ ಆಸ್ಪತ್ರೆ ಮುಂಭಾಗದಲ್ಲಿರುವ ಬಸವಣ್ಣನ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಮತದಾನದ ಹಕ್ಕು ಸಂವಿಧಾನದ ಪ್ರಕಾರ ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕಾಗಿದ್ದು, ಅದನ್ನು ಕದಿಯುವ ಪ್ರಯತ್ನ ನಡೆಯುತ್ತಿರುವುದರಿಂದ ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಬಾಬಾಸಾಹೇಬ್ ಅಂಬೇಡ್ಕರ್ ನೀಡಿದ



ಮತದಾನದ ಹಕ್ಕನ್ನು ಕೇಂದ್ರದ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಹಿಂಪಡೆಯುವ ಪ್ರಯತ್ನ ಮಾಡುತ್ತಿದೆ. ಇದು ಪ್ರಜಾಪ್ರಭುತ್ವದ ವಿರುದ್ಧದ ಕೃತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷ ದೇಶದ ಎಲ್ಲೆಡೆ ಜಮ್ಮು ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೆ ಸಹಿ ಸಂಗ್ರಹಣಾ ಅಭಿಯಾನವನ್ನು ನಡೆಸುತ್ತಿದೆ ಎಂದು ಅವರು ಹೇಳಿದರು.

ರಾಜ್ಯಾದ್ಯಂತ ಪ್ರತಿ ಮತಗಟ್ಟೆ ಮಟ್ಟದಲ್ಲಿ ಕನಿಷ್ಠ 200 ರಿಂದ 250 ಸಹಿಗಳನ್ನು ಸಂಗ್ರಹಿಸಿ ಕೆಪಿಸಿಸಿ ಹಾಗೂ ಎಐಸಿಸಿಗೆ ಕಳುಹಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದರು. ಇದು ದೇಶದ ಪ್ರಜಾಪ್ರಭುತ್ವ ಉಳಿವಿನ ಹೋರಾಟವಾಗಿದೆ. ಜನಪ್ರತಿನಿಧಿಗಳು ವೋಟಿನ ಮೂಲಕ ಆಯ್ಕೆಯಾಗುತ್ತಾರೆ. ಆದರೆ ಮತ ಕಳ್ಳತನದ ಮೂಲಕ ಅಧಿಕಾರ ಕಾಯ್ದುಕೊಳ್ಳುವ ಪ್ರಯತ್ನ ನಡೆಯುತ್ತಿದೆ. ಇಂತಹ ಕ್ರಮಗಳನ್ನು ತಡೆಯಲು ಜನರು ಎಚ್ಚರಿಕೆಯಿಂದಿರಬೇಕು ಎಂದು ಅವರು ಎಚ್ಚರಿಸಿದರು.

ಉದಯ್ ಎಚ್.ಎಚ್. ಮಾತನಾಡಿ, ನಮ್ಮ ಸಂವಿಧಾನ ನೀಡಿದ ಮೂಲಭೂತ ಹಕ್ಕುಗಳನ್ನು ಚುನಾವಣಾ ಆಯೋಗದ ಮೂಲಕ ಕೇಂದ್ರ ಸರ್ಕಾರ ಹಿಂಪಡೆಯುವಂತ ಕೆಲಸ ಮಾಡುತ್ತಿದೆ. ಇದನ್ನು ವಿರೋಧಿಸುವ ಹಾಗೂ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಕೆಪಿಸಿಸಿ ಮಾರ್ಗದರ್ಶನದಲ್ಲಿ ಈ ಸಹಿ ಸಂಗ್ರಹಣಾ ಅಭಿಯಾನ ನಡೆಯುತ್ತಿದೆ ಎಂದು ಹೇಳಿದರು.

ಪ್ರತಿ ಮತಗಟ್ಟೆ ಮಟ್ಟದಲ್ಲಿ ಕನಿಷ್ಠ ನೂರು ಸಹಿಗಳನ್ನು ಸಂಗ್ರಹಿಸುವ ಮೂಲಕ ಕೇಂದ್ರ ಸರ್ಕಾರದ ವಿರುದ್ಧ ಜನರ ಧ್ವನಿಯನ್ನು ತಲುಪಿಸುವ ಕೆಲಸ ಮಾಡಲಾಗುತ್ತಿದೆ. ಮತದಾನದ ಹಕ್ಕು ಕಸಿದುಕೊಳ್ಳುವುದಷ್ಟೇ ಅಲ್ಲ, ಸಾಮಾನ್ಯರು, ಬಡವರು ಹಾಗೂ ಹಿಂದುಳಿದ ವರ್ಗದವರಿಗೆ ದೊರಕಬೇಕಾದ ಸೌಲಭ್ಯಗಳನ್ನು ಹಂತ ಹಂತವಾಗಿ ಕಿತ್ತುಕೊಳ್ಳುತ್ತಿರುವ ಕೇಂದ್ರ ಸರ್ಕಾರದ ಕ್ರಮವನ್ನು ನಾವು ಖಂಡಿಸುತ್ತೇವೆ ಎಂದು ಹೇಳಿದರು. ಜನಸಾಮಾನ್ಯರ ಹಕ್ಕುಗಳಿಗಾಗಿ ಕಾಂಗ್ರೆಸ್ ಪಕ್ಷ ನಿಷ್ಠೆಯಿಂದ ಹೋರಾಟ ಮಾಡುತ್ತಿದ್ದು, ಈ ಸಹಿ ಸಂಗ್ರಹಣೆಯು ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆಯ ಘಂಟೆಯಾಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬೈರುಮುಡಿ ಚಂದ್ರು, ಆಲೂರು ತಾಲೂಕು ಗ್ಯಾರಂಟಿ ಅನುಷ್ಠಾನ ಯೋಜನೆಯ ಅಧ್ಯಕ್ಷ ಪೃಥ್ವಿ, ಪುರಸಭೆಯ ಮಾಜಿ ಅಧ್ಯಕ್ಷ ಸಯ್ಯದ್ ಮುಫೀಸ್, ಕಾಂಗ್ರೆಸ್ ಮುಖಂಡರಾದ ದೇವರಾಜ್ ಬೈಕೆರೆ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಪರ್ವತಯ್ಯ, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಕೃಷ್ಣೇಗೌಡ, ಕಲ್ಗನೆ ಪ್ರಶಾಂತ್ ಇನ್ನಿತರರಿದ್ದರು.

# ಕಾರ್ಮಿಕರಿಗೆ ಕನಿಷ್ಠ ವೇತನ ನೀಡದಿದ್ದರೆ ಕ್ರಮ

## ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿ ಅಧ್ಯಕ್ಷ ಶಾಹೀದ್ ಎಚ್ಚರಿಕೆ

• ಪ್ರಜೋದಯ ವರದಿ

**ಹಾಸನ:** ಕಾರ್ಮಿಕರಿಗೆ ವಿವಿಧ ಸೌಲಭ್ಯ ಜೊತೆಗೆ ಕನಿಷ್ಠ ಕೂಲಿ ಒದಗಿಸಿಕೊಡಲು ರಾಜ್ಯ ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆ ಎಂದು ರಾಜ್ಯ ಕನಿಷ್ಠ ವೇತನ ಸಲಹ ಮಂಡಳಿ ಅಧ್ಯಕ್ಷ ಟಿ.ಎಂ. ಶಾಹೀದ್ ತೆಕ್ಕಿಲ್ ಅವರು ತಿಳಿಸಿದರು.




ಮಂಗಳವಾರ ಸುದ್ದಿಗೋಷ್ಠಿಯ ಮಾತನಾಡಿದ ಅವರು, ನಾನು ಅಧಿಕಾರ ವಹಿಸಿಕೊಂಡ ಬಳಿಕ ರಾಜ್ಯದ 6 ಜಿಲ್ಲೆಗಳಲ್ಲಿ ಪ್ರವಾಸ ಮಾಡಿ, ಕಾರ್ಮಿಕರ ಸಮಸ್ಯೆ ಆಲಿಸಿದ್ದೇನೆ. ಕಾರ್ಖಾನೆಗಳು, ಮಾಲೀಕರು ದುಡಿಯುವ ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿ ಪಡಿಸಿ ನೀಡದಿದ್ದರೆ ಅಂತಹವರ ವಿರುದ್ಧ ಕ್ರಮ ಆಗಲಿದೆ ಎಂದರು.

ರಾಜ್ಯದಲ್ಲಿ ಸುಮಾರು 2 ಲಕ್ಷ ಅಸಂಘಟಿತ ಕಾರ್ಮಿಕರಿದ್ದಾರೆ. 50-60 ಸಾವಿರ ನೋಂದಾ ಯಿತ ಕಾರ್ಮಿಕರಿದ್ದಾರೆ. ಅವರ ಜೀವಕ್ಕೆ ಅಪಾಯವಾದರೆ ಕೂಡಲೇ ನೆರವು ಕೊಡಲು ಕಾರ್ಮಿಕ ಸಚಿವ ಸಂತೋಷ್ ಲಾಡ್ ನೇತೃತ್ವದಲ್ಲಿ ಶ್ರಮಿಸಲಾಗುತ್ತಿದೆ. ಕನಿಷ್ಠ ವೇತನ ನೀಡಿಕೆಯಲ್ಲಿ ದೆಹಲಿ, ಕರ್ನಾಟಕ ಮುಂಚೂಣಿಯಲ್ಲಿವೆ. ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಉತ್ತಮ ಆಡಳಿತ ನೀಡುವ ಮೂಲಕ ಜನ ಸಾಮಾನ್ಯರ ಮನೆಗೆ ಸರ್ಕಾರ ಹೋಗುತ್ತಿದೆ. ಗ್ಯಾರಂಟಿ ಯೋಜನೆಗಳನ್ನು ಬಿಜೆಪಿ-ಜೆಡಿಎಸ್‌ನವರು ಟೀಕಿಸಿದ್ದರು. ಈಗ ಬಿಜೆಪಿ ದೇಶದ ವಿವಿಧೆಡೆ ಇದೇ ಯೋಜನೆ ನಕಲು ಮಾಡುತ್ತಿದೆ ಎಂದು ಟೀಕಿಸಿದರು.

ನಮ್ಮ ಸರ್ಕಾರ ಮಾದರಿ ಕೆಲಸ ಮಾಡುತ್ತಿದೆ. ನಾಡಿನ ಅಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡುತ್ತಿದೆ. ಯಾರು ಏನೇ ಹೇಳಿದರೂ, ನಮ್ಮ ಸರ್ಕಾರ ಸುಭದ್ರವಾಗಿ ಐದು ವರ್ಷ ಅವಧಿ ಪೂರೈಸಿ, ಮುಂದೆಯೂ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

5 ವರ್ಷ ಒಳ್ಳೆಯ ಆಡಳಿತ ಇರಲಿದೆ, ಬಿಜೆಪಿ-ಜೆಡಿಎಸ್ ಅಧಿಕಾರಕ್ಕೆ ಬರಲ್ಲ, ವಿಪಕ್ಷದವರು ಏನಾದರೂ ಸಲಹೆ ನೀಡಿದರೆ ಸ್ವಾಗತ ಮಾಡುತ್ತೇವೆ. ಸರ್ಕಾರ ಬಿದ್ದು ಹೋಗಲಿದೆ ಎಂಬುದು ಊಹಾಪೋಹ, ನಾಯಕತ್ವ ಬದಲಾವಣೆ ವಿಚಾರಗಳನ್ನು ಅನಾವಶ್ಯಕವಾಗಿ ಚರ್ಚೆಗೆ ತರುತ್ತಿ ದ್ದಾರೆ. ಯಾರು ಏನೇ ಹೇಳಿದರೂ ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಜನಪರ ಆಳಿತ ನಡೆಸುತ್ತಿದ್ದಾರೆಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ವಕ್ತಾರ ದೇವರಾಜೇಗೌಡ, ಮುಖಂಡರಾದ ದಿನೇಶ್, ಮಂಜುನಾಥ್ ಶರ್ಮಾ, ರಾಜೇಶ್, ಶಿವಕುಮಾರ್, ದೇವರಾಜೇಗೌಡ ಇದ್ದರು.

# ಅರ್ಥಪೂರ್ಣ ಕನ್ನಡ ರಾಜ್ಯೋತ್ಸವಕ್ಕೆ ತೀರ್ಮಾನ

• ಪ್ರಜೋದಯ ವರದಿ

**ಸಕಲೇಶಪುರ:** ಮುಂಬರುವ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದೆಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ ಕನ್ನಡ ರಾಜ್ಯೋತ್ಸವ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕನ್ನಡ ರಾಜ್ಯೋತ್ಸವವನ್ನು ಅರ್ಥ ಪೂರ್ಣವಾಗಿ ಆಚರಿಸುವ ನಿಟ್ಟಿನಲ್ಲಿ ಇಂದು ವಿವಿಧ ಇಲಾಖೆಗಳ ಅಧಿಕಾರಿಗಳು, ಕನ್ನಡ ಪರ ಸಂಘಟನೆಗಳ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಪೂರ್ವಭಾವಿ ಸಭೆ ಆಯೋಜಿಸಲಾಗಿದೆ ಎಂದು ಹೇಳಿದರು.



ನವೆಂಬರ್ 1ರಂದು ಬೆಳಿಗ್ಗೆ 9 ಗಂಟೆಗೆ ತಾಲ್ಲೂಕು ಆಡಳಿತ ಕಚೇರಿ ಆವರಣದಲ್ಲಿ ಎಲ್ಲಾ ಶಾಲೆಗಳ ಮಕ್ಕಳು ಕೂಡಿಕೊಳ್ಳಲಿದ್ದಾರೆ. ನಂತರ ತಾಲ್ಲೂಕು ಕಚೇರಿಯಿಂದ ಪಟ್ಟಣದ ರಾಜ ಬೀದಿಯ ಮೂಲಕ ಶಾಲಾ ಮಕ್ಕಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಮೆರವಣಿಗೆನಡೆಸಿ ಸುಭಾಷ್ ಮೈದಾನಕ್ಕೆ ತಲುಪಲಿದ್ದಾರೆ.

ಬೆಳಿಗ್ಗೆ 10 ಗಂಟೆಗೆ ಧ್ವಜಾರೋಹಣ ಹಾಗೂ ವಿವಿಧ ಶಾಲೆಗಳ ಮಕ್ಕಳಿಂದ ಸಾಂಸ್ಕೃತಿಕ ಚಟುವಟಿಕೆಗಳ ಪ್ರದರ್ಶನ ನಡೆಯಲಿದೆ. ಕಾರ್ಯಕ್ರಮಕ್ಕೆ ಅಗತ್ಯವಿರುವ ಸಿದ್ಧತೆಯನ್ನು ಮಾಡಲು ಎಲ್ಲಾ ಇಲಾಖೆಗಳು ಪುರಸಭೆಯೊಂದಿಗೆ ಕೈಜೋಡಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸುವ ಮಕ್ಕಳಿಗೆ ಉಪಹಾರದ ವ್ಯವಸ್ಥೆಯನ್ನು ವೈಯಕ್ತಿಕವಾಗಿ ಮಾಡಲಿದ್ದೇನೆಂದು ತಿಳಿಸಿದ್ದಾರೆ. ವಿಭಿನ್ನ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಮಹನೀಯ ರನ್ನು ಸನ್ಮಾನಿಸಲಾಗುವುದು. ಅರ್ಹರನ್ನು ಗುರುತಿಸಿ ಸನ್ಮಾನ ಮಾಡುವ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ತಹಶೀಲ್ದಾರ್ ಸುಪ್ರೀತಾ, ಕಂದಾಯ ಇಲಾಖೆಯ ಶ್ವೇತಾ, ಕರವೇ ಪ್ರವೀಣ್ ಶೆಟ್ಟಿ ಬಣದ ತಾಲ್ಲೂಕು ಅಧ್ಯಕ್ಷ ರಮೇಶ್ ಪೂಜಾರಿ, ಮಲೆನಾಡು ರಕ್ಷಣಾ ಸೇನೆಯ ರಾಜ್ಯಾಧ್ಯಕ್ಷ ಜಾನೆಕೆರೆ ಸಾಗರ್, ಕರವೇ ನಾರಾಯಣ ಗೌಡ ಬಣದ ಗಗನ್, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷರಾದ ಶಾರದಾ ಗುರುಮೂರ್ತಿ, ನಿವೃತ್ತ ತಹಶೀಲ್ದಾರ್ ಅಣ್ಣೇಗೌಡ ಇತರರು ಪಾಲ್ಗೊಂಡಿದ್ದರು.

## ಕಾರ್ಯಾಗಾರ ಮುಂದೂಡಿಕೆ

**ಹಾಸನ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಸನ ಹಾಗೂ ಟೆಕ್ಸಾಕ್, ಬೆಂಗಳೂರುರವರ ಸಂಯುಕ್ತಾಶ್ರಯದಲ್ಲಿ ನ.04 ರಂದು ಮಲ್ನಾಡ್ ಇಂಜಿನಿಯರಿಂಗ್ ಕಾಲೇಜ್ ಹಾಸನದಲ್ಲಿ ನಡೆಯಬೇಕಿದ್ದ Incubation One day Awareness Programmes Under RAMP ಯೋಜನೆಯಡಿಯಲ್ಲಿನ ಒಂದು ದಿನದ ಕಾರ್ಯಗಾರವನ್ನು ಕಾರಣಾಂತರಗಳಿಂದ ನ.06 ರಂದು ಬೆಳಿಗ್ಗೆ 10.30 ಗಂಟೆಗೆ ಆಯೋಜಿಸಲಾಗಿದೆ. ಜಿಲ್ಲೆಯ ಭಾವಿ ಉದ್ದಿಮೆದಾರರು ಭಾಗವಹಿಸಿ ಸದರಿ ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕೆಂದು ಕೋರಿದೆ.

ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಸನ ದೂ. ಸಂಖ್ಯೆ: 08172-296217, 240606 ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

# ಪುರಸಭೆ ಆಸ್ತಿಗೆ ಹಾನಿ: ಸದಸ್ಯರ ವಜಾಗೊಳಿಸಲು ಆಗ್ರಹ

• ಪ್ರಜೋದಯ ವರದಿ

**ಬೇಲೂರು:** ಪುರಸಭೆ ಸಾಮಾನ್ಯ ಸಭೆಯಲ್ಲಿ ಪೀಠೋಪಕರಣ, ಧ್ವನಿ ವರ್ಧಕಗಳನ್ನು ಧ್ವಂಸಗೊಳಿಸಿರುವ ಸದಸ್ಯರನ್ನು ವಜಾಗೊಳಿಸಿ, ಸೂಪರ್ ಸ್ಸೀಡ್ ಮಾಡಬೇಕೆಂದು ಕರವೇ ತಾಲ್ಲೂಕು ಅಧ್ಯಕ್ಷ ಚಂದ್ರಶೇಖರ ಅವರು ಒತ್ತಾಯಿಸಿದರು.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪುರಸಭೆ ಸಭೆಯಲ್ಲಿ ಸದಸ್ಯರು ವಾಗ್ವಾದ ನಡೆಸುವ ವೇಳೆ ಸಾರ್ವಜನಿಕ ಆಸ್ತಿಯನ್ನು ತಮ್ಮ ವೈಯಕ್ತಿಕ ವರ್ಚಸ್ಸಿಗಾಗಿ ನಾಶಪಡಿಸುವುದು ಖಂಡನೀಯ. ಪ್ರತಿ ಸಭೆಯಲ್ಲಿ ಕೂಡ ಸರ್ಕಾರಿ ಆಸ್ತಿಗೆ ಹಾನಿಯುಂಟು ಮಾಡುತ್ತಿರುವ ಪುರಸಭಾ ಸದಸ್ಯರ ಸದಸ್ಯತ್ವವನ್ನು ರದ್ದುಗೊಳಿಸಬೇಕು ಇಲ್ಲವಾದರೆ ಪ್ರತಿಭಟನೆ ಅನಿವಾರ್ಯ



ವೆಂದು ಎಚ್ಚರಿಕೆ ನೀಡಿದರು.

ಪಟ್ಟಣದ ಜನರ ಅಭಿವೃದ್ಧಿಗಾಗಿ ಸರ್ವತೋಮುಖ ಬೆಳವಣಿಗೆಗೆ ಸದಸ್ಯರನ್ನು ಆಯ್ಕೆ ಮಾಡಿ ಕಳುಹಿಸಿದ್ದೇವೆ ಹೊರತು ಅವರ ವೈಯಕ್ತಿಕ ವಿಚಾರಗಳನ್ನು ತೆಗೆದು ಸಂಘರ್ಷ ಮಾಡಲು ಅಲ್ಲ. ಇಲ್ಲಿ ಶಾಸಕರು ತಾಲ್ಲೂಕಿನ ಪ್ರಥಮ ಪ್ರಜೆ. ಪಟ್ಟಣದ ಅಭಿವೃದ್ಧಿಗೆ ಅವರಿಂದ ಸಹಕಾರ ಪಡೆದು ತಮಗೆ ಮತ ನೀಡಿರುವ ಮತದಾರರಿಗೆ ಋಣ ತೀರಿಸುವ ಕೆಲಸ ಮಾಡಬೇಕು. ಅದನ್ನು ಬಿಟ್ಟು ಶಾಸಕರ ಹಾಗು ಪುರಸಭೆ ಆಡಳಿತ ಅಧಿಕಾರಿಗಳ ಮುಂದೆ ಪುರಸಭೆಯ ಆಸ್ತಿತ್ತು ಧ್ವಂಸ ಮಾಡಲು ಯಾವ ಯೋಗ್ಯತೆ ಇದೆ ಎಂದು ಪ್ರಶ್ನಿಸಿದರು.

ಈ ಹಿಂದೆ ಸಂಸದರು, ಶಾಸಕರ ಉಪಸ್ಥಿತಿಯಲ್ಲಿ ನಡೆದ ಸಭೆಯಲ್ಲಿ ಉಂಟಾದ ಹೈಡ್ರಾಮ ಇಡೀ ರಾಜ್ಯವೇ ನೋಡಿತ್ತು. ಇದೀಗ ಮತ್ತದೆ ಪುನಾರಾವರ್ತನೆಯಾಗಿದೆ. ಸಭೆಯಲ್ಲಿ ಸದಸ್ಯರು ಅಸಭ್ಯವಾಗಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಮಾತನಾಡಿರುವುದು ಅತ್ಯಂತ ಖಂಡನೀಯ. ಮಹಿಳಾ ಸದಸ್ಯರು ಇದ್ದಾರೆ ಎಂದು ನೋಡದೆ ಅಸಭ್ಯ ವರ್ತನೆ ತೊರಿಸಿರುವ ಸದಸ್ಯರಿಗೆ ನಾಚಿಕೆಯಾಗಬೇಕು. ವಿರೋಧ ಪಕ್ಷಗಳು ಕಿತ್ತಾಡುವುದನ್ನು ಕಂಡಿದ್ದೇವೆ. ಆದರೆ, ಸ್ವ ಪಕ್ಷದವರೇ ರಂಪಾಟ ನಡೆಸಿರುವುದು ನಾಚಿಕೆಗೇಡಿನ ಸಂಗತಿ. ಪುರಸಭೆ ಆಸ್ತಿಗೆ ಹಾನಿ ಮಾಡಿರುವವರ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಕ್ರಮ ಕೈಗೊಳ್ಳಬೇಕು. ಈ ಘಟನೆ ಬಗ್ಗೆ ಜಿಲ್ಲಾಧಿಕಾರಿ ಸೂಕ್ತ ರೀತಿಯಲ್ಲಿ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿ ದುರ್ವತನೆ ತೋರಿದ ಸದಸ್ಯರ ವಿರುದ್ಧ ಪ್ರಕರಣ ದಾಖಲಿಸಲು ಸೂಚಿಸಬೇಕೆಂದು ಒತ್ತಾಯಿಸಿದರು.

ಮಾಳೆಗೆರೆ ತಾರನಾಥ್, ಅಬ್ದುಲ್ ಖಾದರ್, ಪ್ರಸನ್ನ, ಮೋಹನ್ ಇದ್ದರು.

# ಯುವಜನತೆ ದುಶ್ಚಟಕ್ಕೆ ಬಲಿಯಾಗದಿರಿ

• ಪ್ರಜೋದಯ ವರದಿ

**ಹೊಳೆನರಸೀಪುರ:** ಯುವಜನತೆ ಹಿರಿಯರ ಮಾರ್ಗದರ್ಶನ ಅರ್ಥೈಸಿಕೊಂಡು ಯಾವುದೇ ದುಶ್ಚ ಟಗಳಿಗೆ ಬಲಿಯಾಗದೇ ಮುನ್ನಡೆ ಯಬೇಕೆಂದು ಪ್ರಾಂಶುಪಾಲ ದೇವರಾಜ್ ಅವರು ಸಲಹೆ ನೀಡಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜು ಆವರಣದಲ್ಲಿ ನಶಾ ಮುಕ್ತ ಭಾರತ ಅಭಿಯಾನ ಪ್ರಯುಕ್ತ ಆಯೋಜನೆ ಮಾಡಿದ್ದ ಪ್ರಬಂಧ ಹಾಗು ಚಿತ್ರಕಲಾ ಸ್ಪರ್ಧೆ ಮತ್ತು ಅರಿವಿನ ಜಾಥಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಯುವಕರು ಭವ್ಯ ಭಾರತದ ಉಜ್ವಲ ಪ್ರಜೆಗಳಾಗಿದ್ದು, ಎಂದಿಗೂ ದಿಕ್ಕು ತಪ್ಪಿ ನಡೆಯ ಬಾರದು ಎಂಬ ಉದ್ದೇಶ ಹಾಗು ಭವಿ ಷ್ಯದ ದೃಷ್ಟಿಯಿಂದ ನಶಾ ಮುಕ್ತ ಭಾರತ ಅಭಿಯಾನದ ಕಾರ್ಯ ಕ್ರಮಗಳನ್ನು ಹಮ್ಮಿಕೊಳ್ಳ ಲಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು ಯಾವುದೇ ದುಶ್ಚಟಗಳಿಗೆ ಬಲಿಯಾಗುವುದಿಲ್ಲ ಎಂಬ ಮನಸ್ಥಿತಿಯನ್ನು ನಿರ್ಮಿಸಿಕೊಳ್ಳ ಬೇಕೆಂದು ಪ್ರಮಾಣ ವಚನ ಭೋದಿಸ ಲಾಯಿತು.




ಇದೇ ವೇಳೆ ಕಾಲೇಜಿನ ನೂರಾರು ವಿದ್ಯಾರ್ಥಿನಿಯರು ಅರಿವಿನ ಘೋಷಣೆಗಳನ್ನು ಕೂಗುತ್ತ ಪ್ರಮುಖ ರಸ್ತೆಗಳಲ್ಲಿ ಜಾಥಾನಡೆಸಿದರು. ಉಪನ್ಯಾಸಕರಾದ ಸುದರ್ಶನ್, ನಿರ್ಮಲಾ, ಪವಿತ್ರ, ಮಮತಾ, ಅವಿನಾಶ್, ಶ್ರೀನಿವಾಸ್, ವೀಣಾ, ಕಾಂತರಾಜು, ರಾಘವೇಂದ್ರ, ಶಾಂತ ರಾಜು, ವಾಣಿ ಇದ್ದರು.


**ಕಾವೇರಿ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ, ಕಾನೀನಿನಿ., ಯಗಚಿ ಯೋಜನಾ ವಿಭಾಗ, ಬೇಲೂರು, ಹಾಸನ ಜಿಲ್ಲೆ

**ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ: 06/2025-26 ದಿನಾಂಕ: 24-10-2025 (ಕೆಪಿಪಿಪಿ ಮುಖಾಂತರ ಮಾತ್ರ)**

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪರವಾಗಿ ಕಾರ್ಯಪಾಲಕ ಇಂಜಿನಿಯರ್, ಯಗಚಿ ಯೋಜನಾ ವಿಭಾಗ, ಬೇಲೂರು ಇವರು ಕರ್ನಾಟಕ ಲೋಕೋಪಯೋಗಿ/ಕೇಂದ್ರ ಲೋಕೋಪಯೋಗಿ ಇಲಾಖೆಗಳಲ್ಲಿ ದರ್ಜೆ-III ಹಾಗೂ ಮೇಲ್ಪಟ್ಟ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಕರ್ನಾಟಕ ಪಾರದರ್ಶಕ ಕಾಯಿದೆ 2000 ರ ಅನ್ವಯ ಅಲ್ಪಾವಧಿ ಟೆಂಡರ್‌ಗಳನ್ನು https://kppp.karnataka.gov.in Plat Form ನಲ್ಲಿ SERVICES ಅಡಿಯಲ್ಲಿ ಟೆಂಡರ್‌ಗಳನ್ನು ಕಾರ್ಯಪಾಲಕ ಇಂಜಿನಿಯರ್, ಯಗಚಿ ಯೋಜನಾ ವಿಭಾಗ, ಬೇಲೂರು ಇವರು ಆಹ್ವಾನಿಸಿದ್ದು, ಟೆಂಡರ್ ಪ್ರಕ್ರಿಯೆ ದಿನಾಂಕಗಳು ಈ ಕೆಳಕಂಡಂತಿವೆ. (1) ಟೆಂಡರ್ ಪ್ರೊಸೆಸಿಂಗ್ ಫೀ: https://kppp.karnataka.gov.in ನಲ್ಲಿ ವೀಕ್ಷಿಸಬಹುದು (2)https://kppp.karnataka.gov.in ನಲ್ಲಿ ದಾಖಲಾತಿಗಳನ್ನು ಪಡೆಯುವ ಹಾಗೂ ಅಪ್‌ಲೋಡ್ ಮಾಡುವ ಅವಧಿ: ದಿನಾಂಕ: 29-10-2025 ಸಂಜೆ 4.00 ಘಂಟೆಯಿಂದ ದಿನಾಂಕ: 05-11-2025 ಸಂಜೆ 4.00 ಘಂಟೆವರೆಗೆ (3) ಪ್ರೀಬಿಡ್ ಮೀಟಿಂಗ್ ದಿನಾಂಕ: 02-11-2025 ಬೆಳಿಗ್ಗೆ 11.00 ಘಂಟೆಗೆ (4) ಟೆಂಡರ್ ತೆರೆಯುವ ದಿನಾಂಕ: 07-11-2025 ಬೆಳಿಗ್ಗೆ 11.00 ಘಂಟೆಗೆ (5) ಕೆಲಸದ ಕಾಲಮಿತಿ: 3 ತಿಂಗಳು (ಮಳೆಗಾಲ ಸೇರಿ) (6) ಕಾಮಗಾರಿಯ ಅಂದಾಜು ಮೊತ್ತ: ರೂ.15.00 ಲಕ್ಷಗಳು (7) ಇ.ಎಂ.ಡಿ. ಮೊತ್ತ ರೂ.0.32ಲಕ್ಷಗಳು (8) ಲೋಕೋಪಯೋಗಿ/ಕೇಂದ್ರ ಲೋಕೋಪಯೋಗಿ ಇಲಾಖೆ ದರ್ಜೆ- III ಮತ್ತು ಮೇಲ್ಪಟ್ಟ ವರ್ಗ. ಸೂಚನೆ: 1. ಯಾವುದೇ ಸಂದರ್ಭದಲ್ಲಾದರೂ ಯಾವುದೇ ಕಾರಣ ನೀಡದೆ ಟೆಂಡರ್‌ಗಳನ್ನು ಅಂಗೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ಈ ಕೆಳಗೆ ಸಹಿ ಮಾಡಿರುವವರು ಕಾಯ್ದಿರಿಸಿಕೊಂಡಿರುತ್ತಾರೆ. 2. ಟೆಂಡರ್ ನಿಬಂಧನೆಗಳು ಹಾಗೂ ಸಂಬಂಧಪಟ್ಟ ವಿವರಗಳನ್ನು https://kppp.karnataka.gov.in ವೆಬ್‌ಸೈಟ್‌ನಲ್ಲಿ ಪಡೆಯಬಹುದಾಗಿರುತ್ತದೆ. ಟೆಂಡರಿಗಿಟ್ಟ ಮೊತ್ತವು ಬದಲಾವಣೆಗೆ ಒಳಪಟ್ಟಿರುತ್ತದೆ.

ಸಹಿ/-ಕಾರ್ಯಪಾಲಕ ಇಂಜಿನಿಯರ್, ಕಾನೀನಿನಿ, ಯಗಚಿ ಯೋಜನಾ ವಿಭಾಗ, ಬೇಲೂರು


ವಾಸಾಸಂಇ/ಹಿಸನಿ/ಹಾಸನ/707/ಕೆಎಸ್‌ಎಂಸಿಎ/2025-26


# ಸಿಆರ್ ನಿಯಮಗಳ ವಿರುದ್ಧ ಶಿಕ್ಷಕರ ಸಂಘದ ಆಕ್ಷೇಪಣೆ

• ಪ್ರಜೋದಯ ವರದಿ

**ಸಕಲೇಶಪುರ:** ಸರ್ಕಾರ ಪ್ರಕಟಿಸಿರುವ ಸಿಆರ್ ಕರಡು ನಿಯಮಗಳ ವಿರುದ್ಧ ಶಿಕ್ಷಕರ ಸಂಘವು ಆಕ್ಷೇಪಣೆ ಸಲ್ಲಿಸಿದ್ದು, ಸರ್ಕಾರವು ಈ ನಿಯಮಗಳನ್ನು ಮರುಪರಿಶೀಲಿಸಬೇಕು ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಪ್ರಧಾನ ಕಾರ್ಯದರ್ಶಿ ದೊರೇಶ್ ಎಂ.ಎಸ್. ಅವರು ಒತ್ತಾಯಿಸಿದರು.

ಪಟ್ಟಣದ ಅಂಚೆ ಇಲಾಖೆ ಮುಂಭಾಗದಲ್ಲಿ ಪತ್ರ ಚಳುವಳಿಗೆ ಚಾಲನೆ ನೀಡಿ ನಂತರ ಮಾತನಾಡಿ, ಸರ್ಕಾರ ಅಕ್ಟೋಬರ್ 16ರಂದು ಸಿಆರ್ ಕರುಡು ನಿಯಮಗಳ ಪ್ರಕಟಣೆ ಮಾಡಿದೆ. ಈ ಹಿನ್ನೆಲೆಯಲ್ಲಿ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ಎಲ್ಲಾ ಶಿಕ್ಷಕರ ಸಮ್ಮುಖದಲ್ಲಿ ಆಕ್ಷೇಪಣಾ ಪತ್ರವನ್ನು ಸಲ್ಲಿಸುತ್ತಿದ್ದೇವೆ. ಈ ಪತ್ರವನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ರಶ್ಮಿ ಅವರಿಗೆ ಕಳುಹಿಸಲಾಗುತ್ತಿದೆ ಎಂದು ಹೇಳಿದರು.



2016 ರೊಳಗೆ ನೇಮಕಗೊಂಡ ಶಿಕ್ಷಕರಿಗೆ 2017ರಲ್ಲಿ ಜಾರಿಗೆ ತಂದ ಸಿಆರ್ ನಿಯಮಗಳನ್ನು ಅನ್ವಯಗೊಳಿಸುವುದು ಅನ್ಯಾಯ. ಈ ನಿಯಮಗಳನ್ನು ಕೇವಲ 2017 ನಂತರ ನೇಮಕಗೊಂಡ ಶಿಕ್ಷಕರಿಗೆ ಮಾತ್ರ ಅನ್ವಯಿಸಬೇಕು. ರಾಜ್ಯದಾದ್ಯಂತ ಸುಮಾರು 1.8 ಲಕ್ಷ ಪ್ರಾಥಮಿಕ ಶಾಲಾ ಶಿಕ್ಷಕರು ಈ ಕರುಡು ನಿಯಮಗಳ ವಿರುದ್ಧ ಆಕ್ಷೇಪಣೆ ಸಲ್ಲಿಸುತ್ತಿದ್ದಾರೆ ಎಂದು ಹೇಳಿದರು.

ಸೆಪ್ಟೆಂಬರ್ 1 ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯವು ಪ್ರತಿಯೊಬ್ಬ ಪ್ರಾಥಮಿಕ ಶಾಲಾ ಶಿಕ್ಷಕರು ಸೇವೆಯಲ್ಲಿ ಮುಂದುವರೆಯಲು ಟಿಇಟಿ ಅರ್ಹತೆ ಕಡ್ಡಾಯ ಎಂದು ತೀರ್ಪು ನೀಡಿದೆ. ಈ ತೀರ್ಪನ್ನು ಮರುಪರಿಶೀಲಿಸಲು ಈಗಾಗಲೇ ರಾಷ್ಟ್ರೀಯ ಶಿಕ್ಷಕರ ಸಂಘವು ಮೇಲ್ಮನವಿಯನ್ನು ಸಲ್ಲಿಸಿದೆ. ಈ ಹಿನ್ನೆಲೆಯಲ್ಲಿ ರಾಜ್ಯದಾದ್ಯಂತ ನಾವು ಪತ್ರ ಚಳುವಳಿ ಮೂಲಕ ಸರ್ಕಾರಕ್ಕೆ ಆಕ್ಷೇಪಣಾ ಪತ್ರಗಳನ್ನು ಸಲ್ಲಿಸುತ್ತಿದ್ದೇವೆ ಎಂದು ಅವರು ತಿಳಿಸಿದರು.

2016 ಕ್ಕಿಂತ ಮುಂಚೆ ನೇಮಕಗೊಂಡು ಬಿ.ಎಡ್ ಅಥವಾ ಮಾಸ್ಟರ್ ಪದವಿ ಪಡೆದ ಶಿಕ್ಷಕರಿಗೆ ಈ ಹೊಸ ಸಿಆರ್ ನಿಯಮವನ್ನು ಅನ್ವಯಿಸುವುದು ಅನ್ಯಾಯವಾಗುತ್ತದೆ. ಹಿಂದೆ ಇದ್ದ ರೀತಿಯಂತೆ ಪ್ರೌಢಶಾಲೆಗೆ ಬಡ್ತಿ ನೀಡುವ ವ್ಯವಸ್ಥೆಯನ್ನು ಮುಂದುವರಿಸಬೇಕು ಮತ್ತು ಈ ಶಿಕ್ಷಕರನ್ನು ಜಿಪಿಟಿ ಶಿಕ್ಷಕರಾಗಿ ಪರಿಗಣಿಸಬೇಕು ಎಂಬುದು ಸಂಘದ ಒತ್ತಾಯವಾಗಿದೆ ಎಂದು ಅವರು ಹೇಳಿದರು.

ಸರ್ಕಾರ ಮತ್ತು ಇಲಾಖೆ ನಮ್ಮ ಮನವಿಗೆ ಸ್ಪಂದಿಸದಿದ್ದರೆ, ಮುಂದಿನ ದಿನಗಳಲ್ಲಿ ಉಗ್ರ ಹೋರಾಟವನ್ನು ಕೈಗೊಳ್ಳಲಾಗುತ್ತದೆ ಎಂದು ಅವರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಬಸವರಾಜು, ಸಿಆರ್‌ಪಿ ತೇಜಸ್, ಸಾವಿತ್ರಿಬಾಯಿ ಸಂಘದ ಅಧ್ಯಕ್ಷೆ ಉಮಾದೇವಿ, ಕಾರ್ಯದರ್ಶಿ ಮಮತಾ ಡಿ., ಪ್ರಕಾಶ್, ಮನು, ಜಗದೀಶಯ್ಯ, ಅನುಪಮಾ, ನಸೀಮಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಟರ್ಕಿ ಮಧ್ಯಸ್ಥಿಕೆಯಲ್ಲಿ ಪಾಕ್-ಅಫ್ಘಾನಿಸ್ತಾನ ಶಾಂತಿ ಮಾತುಕತೆ

**ಇಸ್ಲಾಮಾಬಾದ್:** ಗಡಿಯುದ್ದಕ್ಕೂ ಭಯೋತ್ಪಾದಕ ಚಟುವಟಿಕೆಗಳನ್ನು ನಿಗ್ರಹಿಸುವುದು, ಶಾಂತಿ ಮರುಸ್ಥಾಪನೆ, ದ್ವಿಪಕ್ಷೀಯ ಸಹಕಾರ ಸೇರಿ ಹಲವು ವಿಷಯಗಳ ಕುರಿತು ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನ ರಾಷ್ಟ್ರಗಳು ಟರ್ಕಿ ಮಧ್ಯಸ್ಥಿಕೆಯಲ್ಲಿ ನ.1ರಿಂದ 3 ದಿನ ಮಾತುಕತೆ ನಡೆಸಲಿವೆ.

ಇಸ್ತಾಂಬುಲ್‌ನಲ್ಲಿ ನಡೆಯಲಿರುವ ಈ ಮಾತುಕತೆಯು ನ.3ರವರೆಗೆ ಮುಂದುವರಿಯಲಿದೆ. ಆದರೆ, ಮಾತುಕತೆಯಲ್ಲಿ ಯಾವುದೇ ಅಂತಿಮ ಒಪ್ಪಂದಕ್ಕೆ ಬರಲಾಗುವುದಿಲ್ಲ ಎಂದು ಡಾನ್ ಪತ್ರಿಕೆಯ ವರದಿ ಮಾಡಿದೆ.

ಸಭೆಯಲ್ಲಿ ಚರ್ಚೆಯಾಗಲಿರುವ ಹೆಚ್ಚಿನ ಅಂಶಗಳನ್ನು ಉಭಯ ದೇಶಗಳು ಈಗಾಗಲೇ ಪರಸ್ಪರಒಪ್ಪಿ ಕೊಂಡಿವೆ. ಮುಖ್ಯವಾಗಿ ಅಫ್ಘಾನಿಸ್ತಾನ ವನ್ನು ಕೇಂದ್ರವಾಗಿಸಿಕೊಂಡು ಕಾರ್ಯಾಚರಿಸುತ್ತಿರುವ ನಿಷೇಧಿತ ತೆಹ್ರೀಕ್ ಇತಾಲಿಬಾನ್ ಪಾಕಿಸ್ತಾನ್ (ಟಿಟಿಪಿ) ವಿರುದ್ಧ ಕ್ರಮ ಕೈಗೊಳ್ಳುವಂತೆ ಪಾಕಿಸ್ತಾನವು ಈ ಸಭೆಯಲ್ಲಿ ಒತ್ತಾಯಿ ಸುವ ಸಾಧ್ಯತೆಗಳಿವೆ. ಈ ಬಗ್ಗೆ ಸಭೆಯ ಬಳಿಕ ಉಭಯ ದೇಶಗಳು ಜಂಟಿ ಪ್ರಕಟಣೆ ಹೊರಡಿಸಬಹುದೆಂದು ಅಧಿಕಾರಿಗಳು ಹೇಳಿದ್ದಾರೆ.

